ಸಂಪುಟ : 9 ಸಂಚಿಕೆ 216 ಪುಟ : 4 ಬೆಲೆ: 3.00 ಶುಕ್ರವಾರ ಅಕ್ಟೋಬರ್ 4 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 216 Pages : 4 Price : 3.00 Friday October 4 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ದಸರಾ ದರ್ಬಾರ್ ಪೂರ್ವ ಸಿದ್ಧತೆ ಪರಿಶೀಲನೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಅಬ್ಬಿಗೇರಿಯಲ್ಲಿ ಅ. 3ರಿಂದ ಜರುಗಲಿರುವ ಬಾಳೆಹೊನ್ನೂರು ಶ್ರೀಮದ್ ರಂಭಾಪುರಿ ಜಗದ್ಗುರುಗಳವರ ದಸರಾ ದರ್ಬಾರ್ ಕಾರ್ಯಕ್ರಮದ ಪೂರ್ವ ಸಿದ್ಧತೆಯನ್ನು ಸ್ವಾಗತ ಸಮಿತಿ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ದಸರಾ ಧರ್ಮ ಸಮ್ಮೇಳನದ ವಾಲ್ ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಅವರು, ಈ ಧರ್ಮ ಸಮ್ಮೇಳನ ನಾಡಿನ ಹಬ್ಬವಾಗಿದ್ದು, ಇದು ಗುರುಮನೆ ದಸರಾ ಆಗಿದೆ. ಎಲ್ಲರ ತ್ರಿಕರಣ ಸೇವೆಯಿಂದ ಈ ಮಹಾ ಸಮ್ಮೇಳನ ಯಶಸ್ವಿಯಾಗುವದು. ಎಲ್ಲರ ಸೇವೆ ಅಗತ್ಯ ಎಂದು ತಿಳಿಸಿದರು.

ಹಿರೇಮಠದ ವೀರಭದ್ರ ಶಿವಾಚಾರ್ಯರು ಮಾತನಾಡಿ, ಧರ್ಮ ಸಮ್ಮೇಳನವು ಮಾನವನು ಧರ್ಮದಲ್ಲಿರಬೇಕು, ಧರ್ಮ ಪರಿಪಾಲನೆ ಮಾಡಬೇಕು ಎಂಬ ಸಂದೇಶ ಸಾರುತ್ತದೆ. ಇಂತಹ ಮಾನವೀಯ ಮೌಲ್ಯಗಳನ್ನು ಬಿತ್ತಲು ಧರ್ಮ ಸಮ್ಮೇಳನವು ಸೂಕ್ತ ವೇದಿಕೆಯಾಗಿದೆ ಎಂದರು.

ಈ ಸಂದರ್ಭದಲ್ಲಿ ಪಾಲಾಕ್ಷಯ್ಯ ಅರಳೆಲೆಮಠ, ಬಸವರಾಜ ಪಲ್ಲೇದ, ಸುರೇಶ ಬಸವರಡ್ಡೇರ, ಬಾಬುಗೌಡ ಪಾಟೀಲ, ಎ.ವಿ. ವೀರಾಪೂರ, ಗುರಣ್ಣ ಅವರಡ್ಡಿ, ಮಂಜು ಅಂಗಡಿ, ಸಿದ್ದು ಹನುಮನಾಳ, ಮಹದೇವಪ್ಪ ಕಂಬಳಿ, ಹನುಮಂತ ದ್ವಾಸಲ, ರಾಮನಗೌಡ ಹಲಕುರ್ಕಿ, ವಿಜಯಕುಮಾರ ಹಿರೇಮಠ, ಈಶಪ್ಪ ನೀರಲೋಟಿ,ದೇವನಗೌಡ ಮುನೇನಕೊಪ್ಪ, ವಿನಾಯಕ ಜೋಶಿ, ಬಸವರಾಜ ಕಮ್ಮಾರ, ಮಲ್ಲೇಶಪ್ಪ ಗದುಗಿನ, ಮಂಜು ಚಿತ್ತರಗಿ, ಭರಮಪ್ಪ ಹನುಮನಾಳ, ಶಿವಣ್ಣ ಗುಗ್ಗರಿ, ದುರುಗೇಶ ಬಂಡಿವಡ್ಡರ, ಸೋಮನಗೌಡ ಕಣವಿ, ರಾಜು ಬೆಂಗಳೂರಶೆಟ್ರ, ಬಸವರಾಜ ಚವಡಿ, ಪ್ರಭು ಸಂಗಟಿ, ಕುಮಾರ ಭೀಮನಗೌಡ್ರ, ಈರಣ್ಣ ಸೊಂಪುರ ಸೇರಿದಂತೆ ಇತರರಿದ್ದರು.

## ರಸ್ತೆಗಳ ಗುಂಡಿ ಮುಚ್ಚದಿದ್ದರೆ ಜನಾಂದೋಲನ

**■ವಿಜಯಸಾಕ್ಷಿ ಸುದ್ದಿ, ಗದಗ**



ಗದಗ-ಬೆಟಗೇರಿ ಅವಳಿ ನಗರದ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿ ಸಂಚಾರವೇ ದುಸ್ತರವಾಗಿದೆ. ಇನ್ನು 15 ದಿನಗಳಲ್ಲಿ ಜಿಲ್ಲಾಡಳಿತ ಹಾಗೂ ನಗರಸಭೆ ಪೌರಾಯುಕ್ತರ ನೇತೃತ್ವದಲ್ಲಿ ಗುಂಡಿ ಮುಚ್ಚುವ ಕಾರ್ಯ ಆರಂಭವಾಗದೇ ಇದ್ದರೆ ಜನಾಂದೋಲನ ಕೈಕೊಳ್ಳುವುದಾಗಿ ಬಿಜೆಪಿ ಮುಖಂಡರಾದ ವಿಜಯಕುಮಾರ ಗಡ್ಡಿ ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಸ್ತೆಗಳ ಗುಂಡಿ ಸಮಸ್ಯೆ ಇಂದು-ನಿನ್ನೆಯದಲ್ಲ. ಸುದೀರ್ಘ ಸಮಯದಿಂದ ಗದಗ-ಬೆಟಗೇರಿ ನಾಗರಿಕರು ಈ ಅವ್ಯವಸ್ಥೆಯನ್ನು ಅನುಭವಿಸುತ್ತಿದ್ದಾರೆ. ಗದಗ-ಬೆಟಗೇರಿ ಅವಳಿ ನಗರದ ಯಾವೊಂದು ಮುಖ್ಯರಸ್ತೆಯೂ ಗುಂಡಿಗಳಿಂದ ಮುಕ್ತವಾಗಿಲ್ಲ. ವಾಹನ ಚಲಾಯಿಸಲು ಅಡಚಣೆ ಉಂಟಾಗಿ ದಿನಕ್ಕೊಂದು ಕಡೆ ಅಪಘಾತ ಸಂಭವಿಸಿ ವಾಹನ ಸವಾರರು ಗಾಯಗೊಳ್ಳುತ್ತಿದ್ದಾರೆ. ಮಳೆಗಾಲವಾಗಿರುವುದರಿಂದ ರಸ್ತೆಗಳ ಗುಂಡಿಗಳಲ್ಲಿ ನೀರು ತುಂಬಿಕೊಂಡು ವಾಹನ ಸವಾರರಿರಲಿ, ಪಾದಚಾರಿಗಳೇ ಸಂಕಷ್ಟ ಅನುಭವಿಸುವಂತಾಗಿದೆ.

ಸಂಬಂಧಿಸಿದ ಅಧಿಕಾರಿಗಳು ಕೂಡಲೇ ಎಚ್ಚೆತ್ತು ಗುಂಡಿ ಮುಚ್ಚುವ ಕಾರ್ಯ ಮಾಡದಿದ್ದರೆ ಜನರಿಂದ ದೇಣಿಗೆ ಸಂಗ್ರಹಿಸಿ ರಸ್ತೆ ಗುಂಡಿ ಮುಚ್ಚುವ ಕಾರ್ಯಕ್ಕೆ ಚಾಲನೆ ನೀಡಲಾಗುವುದು ಎಂದು ತಿಳಿಸಿದ್ದಾರೆ.

### ಶ್ರೀ ರಂಭಾಪುರಿ ಜಗದ್ಗುರುಗಳ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳನಕ್ಕೆ ಅದ್ದೂರಿ ಚಾಲನೆ

# ದಸರಾ ಧರ್ಮ ಸಮ್ಮೇಳನದಿಂದ ಅರಿವಿನ ಪ್ರಜ್ಞೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಂಚಾಚಾರ್ಯರು, ಶಿವಶರಣರು ವೀರಶೈವ ಧರ್ಮದ ಮೂಲಕ ಮಾನವ ಮಹಾದೇವನಾಗಬಲ್ಲ ಎನ್ನುವುದನ್ನು ತೋರಿಸಿಕೊಟ್ಟಿದ್ದಾರೆ. ವೀರಶೈವ ಧರ್ಮಕ್ಕೆ ಅದರದೇ ಆದ ಇತಿಹಾಸವಿದ್ದರೂ ಅಧ್ಯಯನ ಇಲ್ಲ. ಅನುಭವ ಇದೆಯಾದರೂ ಅನುಷ್ಠಾನ ಇಲ್ಲ. ದೊಡ್ಡ ಸಮಾಜವಿದೆ, ಆದರೆ ಸಂಘಟನೆ ಇಲ್ಲ. ವೀರಶೈವ ಧರ್ಮದ ಒಳಪಂಗಡಗಳಿಗೆ ಸೂಕ್ತ ಸೌಲಭ್ಯಗಳು ಸಿಗಬೇಕಿದೆ. ಆದರೆ ಅದಕ್ಕಾಗಿ ಸಮಾಜವನ್ನು ವಿಭಜಿಸುವುದು ಬೇಡ. ಸಮಾಜದ ಮಠಾಧಿಪತಿಗಳು, ಹಿರಿಯರು ವೀರಶೈವ ಧರ್ಮವನ್ನು ಒಂದಾಗಿ ಮುನ್ನಡೆಯುವಂತೆ ಮಾಡಬೇಕಿದೆ ಎಂದು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು.

ಗುರುವಾರ ಸಮೀಪದ ಅಬ್ಬಿಗೇರಿ ಗ್ರಾಮದ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯ ಆವರಣದಲ್ಲಿ ನಿರ್ಮಿಸಿದ ಮಾನವ ಧರ್ಮ ಮಂಟಪದಲ್ಲಿ 33ನೇ ವರ್ಷದ ದಸರಾ ಧರ್ಮ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಬ್ಬಿಗೇರಿಯ ಕೆರೆಗೆ ಕಾಯಕಲ್ಪ ಕೊಡಬೇಕು ಎಂದು ವೀರಭದ್ರ ಶಿವಾಚಾರ್ಯ ಶ್ರೀಗಳು ವಿ. ಸೋಮಣ್ಣ ಅವರಲ್ಲಿ ಮನವಿ ಮಾಡಿದ್ದರು. ಅಂತೆಯೇ ರೋಣ ಶಾಸಕ ಜಿ.ಎಸ್. ಪಾಟೀಲ, ಗದಗ-ಗಜೇಂದ್ರಗಡ- ವಾಡಿ ರೈಲ್ವೆ ಕಾಮಗಾರಿಗೆ ಮಂಜೂರಾತಿ ಮಾಡಿಕೊಡಿ ಎಂದು ಮನವಿ ಮಾಡಿಕೊಂಡರು. ಇದಕ್ಕೆ ಸ್ಪಂದಿಸಿದ ಸಚಿವ ಸೋಮಣ್ಣ, ರಾಜ್ಯದ ರೈಲ್ವೆ ಯೋಜನೆಗಳಿಗೆ ಸಂಬಂಧಿಸಿದಂತೆ ಕಾಮಗಾರಿ ಬಾಕಿ ಇದೆ. ಆ ಎಲ್ಲ ಕಾಮಗಾರಿ ಮುಗಿಸಿ, ನಿಮ್ಮ ಬೇಡಿಕೆಗೆ ಸ್ಪಂದಿಸುವೆ.



ಇನ್ನು ವಾರದಲ್ಲಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಅಬ್ಬಿಗೇರಿ ಕೆರೆಗೆ ಕಾಯಕಲ್ಪ ನೀಡುವೆ ಎಂದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಮಾತನಾಡಿ, ಭಾರತೀಯ ಸಂಸ್ಕೃತಿ ಮತ್ತು ಪರಂಪರೆ ಅತ್ಯಂತ ಪವಿತ್ರವಾದುದು. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಧರ್ಮ ಪ್ರಜ್ಞೆ ಮತ್ತು ರಾಷ್ಟ್ರ ಪ್ರಜ್ಞೆ ಬೆಳೆದು ಬರಬೇಕಾಗಿದೆ. ಭೌತಿಕ ಜೀವನ ಸಮೃದ್ಧಗೊಂಡಂತೆ ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕು ಎಂದರು.

ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮೈಸೂರಿನಲ್ಲಿ ಅರಮನೆಯ ದಸರಾ ನಡೆದರೆ ಅಬ್ಬಿಗೇರಿಯಲ್ಲಿ ಗುರು ಪೀಠದ ದಸರಾ ನಡೆಯುತ್ತಿದೆ. ಈ ಸಮಾರಂಭದಿಂದ ಸಮುದಾಯದಲ್ಲಿ ಆಧ್ಯಾತ್ಮ ಜ್ಞಾನ, ಸಾಮರಸ್ಯ, ಸದ್ಭಾವನೆ ಬೆಳೆಯುವುದರಲ್ಲಿ ಸಂದೇಹವಿಲ್ಲ ಎಂದರು.

ಅಬ್ಬಿಗೇರಿಯ ಕೆರೆಗೆ ಕಾಯಕಲ್ಪ ಕೊಡಬೇಕು ಎಂದು ವೀರಭದ್ರ ಶಿವಾಚಾರ್ಯ ಶ್ರೀಗಳು ವಿ. ಸೋಮಣ್ಣ ಅವರಲ್ಲಿ ಮನವಿ ಮಾಡಿದ್ದರು. ಅಂತೆಯೇ ರೋಣ ಶಾಸಕ ಜಿ.ಎಸ್. ಪಾಟೀಲ, ಗದಗ-ಗಜೇಂದ್ರಗಡ-ವಾಡಿ ರೈಲ್ವೆ ಕಾಮಗಾರಿಗೆ ಮಂಜೂರಾತಿ ಮಾಡಿಕೊಡಿ ಎಂದು ಮನವಿ ಮಾಡಿಕೊಂಡರು. ಇದಕ್ಕೆ ಸ್ಪಂದಿಸಿದ ಸಚಿವ ಸೋಮಣ್ಣ, ರಾಜ್ಯದ ರೈಲ್ವೆ ಯೋಜನೆಗಳಿಗೆ ಸಂಬಂಧಿಸಿದಂತೆ ಕಾಮಗಾರಿ ಬಾಕಿ ಇದೆ. ಆ ಎಲ್ಲ ಕಾಮಗಾರಿ ಮುಗಿಸಿ, ನಿಮ್ಮ ಬೇಡಿಕೆಗೆ ಸ್ಪಂದಿಸುವೆ. ಇನ್ನು ವಾರದಲ್ಲಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ ಅಬ್ಬಿಗೇರಿ ಕೆರೆಗೆ ಕಾಯಕಲ್ಪ ನೀಡುವೆ ಎಂದರು.

ಶಿರಕೋಳ ಹಿರೇಮಠದ ಗುರುಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು, ಸಿದ್ಧರಬೆಟ್ಟ ಕ್ಷೇತ್ರ-ಅಬ್ಬಿಗೇರಿ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ನವರಾತ್ರಿಯಲ್ಲಿ ಶಕ್ತಿ ಆರಾಧನೆ ಕುರಿತು ಲಕ್ಷ್ಮೇಶ್ವರದ ಡಾ. ಜಯಶ್ರೀ ಹೊಸಮನಿ ಮಾತನಾಡಿದರು. ಖನಿಜ ನಿಗಮದ ಅಧ್ಯಕ್ಷ, ರೋಣ ಶಾಸಕ ಹಾಗೂ ಸ್ವಾಗತ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಸ್ವಾಗತಿಸಿದರು. ಅಬ್ಬಿಗೇರಿ ಗ್ರಾ.ಪಂ ಅಧ್ಯಕ್ಷ ನೀಲಪ್ಪ ದ್ವಾಸಲ, ಉಪಾಧ್ಯಕ್ಷೆ ಅಕ್ಕಮ್ಮ ಡೊಳ್ಳಿನ, ಆರ್.ಎಸ್. ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮುಂತಾದವರು ಉಪಸ್ಥಿತರಿದ್ದರು.

> ಸಮಾಜದ ಎಲ್ಲ ರಂಗಗಳಲ್ಲಿ ಹೆಚ್ಚುತ್ತಿರುವ ಸಂಘರ್ಷ ನಿಂತು ಶಾಂತಿ, ನೆಮ್ಮದಿ, ಸಾಮರಸ್ಯ ಬೆಳೆಸಿಕೊಂಡು ಬರುತ್ತಿರುವುದಕ್ಕೆ ಶ್ರೀ ರಂಭಾಪುರಿ ಪೀಠದ ಶರನ್ನವರಾತ್ರಿ ದಸರಾ ಸಮಾರಂಭ ಸಾಕ್ಷಿಯಾಗಿದೆ. ನವರಾತ್ರಿ ಮೊದಲ ದಿನ ಶೈಲ ಪುತ್ರಿ ನಾಮಾಂಕಿತದಲ್ಲಿ ದೇವಿಯನ್ನು ಪೂಜಿಸುತ್ತಾರೆ. ಭೌತಿಕ ಸುಖದೆಡೆಗೆ ಆಕರ್ಷಿತರಾಗದೇ ಆತ್ಮಜ್ಞಾನ ಪಡೆಯಲು ಮುಂದಾಗಬೇಕು. ಶೈಲ ಪುತ್ರಿ ಶಕ್ತಿ ಆರಾಧನೆಯಿಂದ ಕೆಟ್ಟ ಪರಿಣಾಮ ಮತ್ತು ಅಪಶಕುನ ದೂರಾಗಿ ಬದುಕಿನಲ್ಲಿ ಶಾಂತಿ, ಸಂತೃಪ್ತಿ ಉಂಟಾಗುವುದು.
>
> **– ಶ್ರೀ ರಂಭಾಪುರಿ ಜಗದ್ಗುರುಗಳು.**
> ಶ್ರೀಪೀಠ, ಬಾಳೆಹೊನ್ನೂರು.

> ವೀರಶೈವ ಎನ್ನುವುದು ಕೇವಲ ಜಾತಿಯಲ್ಲ. ಅದೊಂದು ತತ್ವ-ಸಿದ್ಧಾಂತ ಹೊಂದಿದ ಧರ್ಮ. ಆದರೆ ವೀರಶೈವ ಧರ್ಮ ಕಾಲಕಾಲಕ್ಕೆ ವಿಕಾಸವಾಗಿ ಒಳಪಂಗಡದ ಹೆಸರಿನಲ್ಲಿ ಕವಲು ದಾರಿ ಹಿಡಿದಿರುವುದು ಸರಿಯಲ್ಲ. ರಂಭಾಪುರಿ ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಶ್ರೀಗಳ ದಸರಾ ಧರ್ಮ ಸಮ್ಮೇಳನ ಜನರಲ್ಲಿ ಅರಿವಿನ ಪ್ರಜ್ಞೆ ಮೂಡಿಸುತ್ತದೆ. ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆ ಮುಖ್ಯ ಎನ್ನುವುದು ಧರ್ಮದ ಮೂಲಮಂತ್ರ. ಧರ್ಮಗಳು ಹಲವು ಆದರೆ ಎಲ್ಲವೂ ಮಾನವ ಕಲ್ಯಾಣವನ್ನೇ ಪ್ರತಿಪಾದಿಸಿದೆ ಎಂದು ಸಚಿವ ವಿ.ಸೋಮಣ್ಣ ಅಭಿಪ್ರಾಯಪಟ್ಟರು.

### ವನ್ಯಜೀವಿ ಸಪ್ತಾಹದ ಕಾಲ್ನಡಿಗೆ ಜಾಥಾ ಕಾರ್ಯಕ್ರಮದಲ್ಲಿ ವೈಶಾಲಿ ಕುಲಕರ್ಣಿ

# ಪ್ರಾಣಿ-ಮಾನವ ಸಂಘರ್ಷ ತಪ್ಪಿಸಲು ಕ್ರಮ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಅರಣ್ಯ ನಾಶದಿಂದ ಉಂಟಾಗುತ್ತಿರುವ ಪ್ರಾಣಿ ಮತ್ತು ಮಾನವ ಸಂಘರ್ಷವನ್ನು ತಪ್ಪಿಸಲು ತೊಂದರೆಯಲ್ಲಿರುವ ವನ್ಯಜೀವಿಗಳನ್ನು ಸಂರಕ್ಷಿಸಬೇಕು. ಮತ್ತು ಅವುಗಳ ಸ್ವಚ್ಛಂದ ಜೀವನವನ್ನು ಉಳಿಸಿ ಬೆಳಸಲು ಎಲ್ಲರೂ ಪ್ರಯತ್ನಿಸಬೇಕೆಂದು ಕರ್ನಾಟಕ ವನ್ಯಜೀವಿ ಮಂಡಳಿಯ ಸದಸ್ಯೆ ವೈಶಾಲಿ ಕುಲಕರ್ಣಿ ಹೇಳಿದರು.

ಅವರು ಗುರುವಾರು ಬೆಳಿಗ್ಗೆ ಅರಣ್ಯ ಇಲಾಖೆಯ ಧಾರವಾಡ ಪ್ರಾದೇಶಿಕ ವಿಭಾಗದ ಧಾರವಾಡ ವೃತ್ತದಿಂದ 70ನೇ ವನ್ಯಜೀವಿ ಸಪ್ತಾಹದ ಅಂಗವಾಗಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆಯೋಜಿಸಿದ್ದ ಕಾಲ್ನಡಿಗೆ ಜಾಥಾ ಕಾರ್ಯಕ್ರಮದ




ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಅರಣ್ಯ ನಾಶದಿಂದಾಗಿ ಪ್ರಾಣಿಗಳು ನಾಡಿಗೆ ಆಗಮಿಸುತ್ತಿದ್ದು, ಇದರಿಂದ ಮಾನವ ಹಾಗೂ ಪ್ರಾಣಿ ಸಂಘರ್ಷವು ದಿನದಿಂದ ದಿನಕ್ಕೆ ಸಾಮಾನ್ಯವಾಗುತ್ತಿದೆ. ಇದನ್ನು ತಪ್ಪಿಸಲು ಮತ್ತು ಅರಣ್ಯ ನಾಶವನ್ನು ತಡೆಗಟ್ಟಲು ಸರ್ಕಾರವು ಅರಣ್ಯ ಒತ್ತುವರಿ ತೆರವುಗೊಳಿಸಲು ಕಠಿಣ ಕ್ರಮಗಳನ್ನು ಕೈಗೊಂಡಿದೆ ಎಂದು ಹೇಳಿದರು.

> ರಾಜ್ಯ ಸರ್ಕಾರವು ರಾಜ್ಯದ ವೈವಿಧ್ಯಮಯವಾದ ಅರಣ್ಯ, ಸಸ್ಯ ಸಂಪತ್ತು ಮತ್ತು ವನ್ಯ ಜೀವಿಗಳನ್ನು ಸಂರಕ್ಷಿಸಲು ಆದ್ಯತೆ ನೀಡಿ ಹೊಸ ಕಾನೂನುಗಳನ್ನು ಜಾರಿಗೊಳಿಸುತ್ತಿದೆ. ಧಾರವಾಡ ಜಿಲ್ಲೆಯು ಅರೆ ಮಲೆನಾಡು ಆಗಿರುವದರಿಂದ ಬೆಳಗಾವಿ ಹಾಗೂ ಉತ್ತರಕನ್ನಡ ಜಿಲ್ಲೆಗಳ ಗಡಿಗೆ ಹೊಂದಿಕೊಂಡಿರುವ ಜಿಲ್ಲೆಯ ಭೂಪ್ರದೇಶವನ್ನು ಹೆಚ್ಚು ಅರಣ್ಯೀಕರಣಗೊಳಿಸಲು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದು ವೈಶಾಲಿ ಕುಲಕರ್ಣಿ ಹೇಳಿದರು.

▸▸3ನೇ ಪುಟಕ್ಕೆ

### ಗದಗ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮ

# ಪರಿಸರ ಸ್ವಚ್ಛತೆ ಬಗ್ಗೆ ಜಾಗೃತಿಯಿರಲಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ, ಜಿಲ್ಲಾ ನ್ಯಾಯಾಂಗ, ಜಿಲ್ಲಾ ವಕೀಲರ ಸಂಘ, ಗದಗ, ಹಾಗೂ ನಗರಸಭೆ ಗದಗ-ಬೆಟಗೇರಿ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಸ್ವಚ್ಛತಾ ಹಿ ಸೇವಾ-2024ರ ಸ್ವಭಾವ ಸ್ವಚ್ಛತಾ-ಸಂಸ್ಕಾರ ಸ್ವಚ್ಛತಾ ಅಭಿಯಾನದಡಿಯಲ್ಲಿ ಸ್ವಚ್ಛತಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ಮಾತನಾಡಿ, ಪ್ರತಿಯೊಬ್ಬರೂ ತಮ್ಮ ಸುತ್ತಮುತ್ತಲಿನ ಪರಿಸರ ಸ್ವಚ್ಛತೆ ಬಗ್ಗೆ ಜಾಗೃತಿ ಹೊಂದುವುದು ಅವಶ್ಯಕ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿಪಾಟೀಲ ವಹಿಸಿದ್ದರು. ಅತಿಥಿಗಳಾಗಿ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರ ಎಸ್.ಶೆಟ್ಟಿ, ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಕಾಶೀಮ ಚೂರಿಖಾನ, 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಎಚ್.ಬೆನಕಟ್ಟಿ, ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್. ಶಿವನಗೌಡ್ರ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ವ ಸಿಜೆಎಂ ಜಿ.ಆರ್. ಶೆಟ್ಟರ, ಅಪರ ಹಿರಿಯ ದಿವಾಣಿ ನ್ಯಾಯಾಧೀಶರಾದ ಪದ್ಮಶ್ರೀ ಆರ್.ಪಾಟೀಲ, ಜೆಎಂಎಫ್‌ಸಿ 1ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ದೀಪ್ತಿ ನಾಡಗೌಡ, ಜೆಎಂಎಫ್‌ಸಿ 2ನೇ ನ್ಯಾಯಾಲಯದ ದಿವಾಣಿ ನ್ಯಾಯಾಧೀಶರಾದ ಬೀರಪ್ಪ ಕಾಂಬಳೆ, ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರಾದ ಮಹೇಶ ಪೋತದಾರ, ಜಿಲ್ಲಾ ವಕೀಲರ ಸಂಘದ ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ, ಉಪಾಧ್ಯಕ್ಷರಾದ ಅಶೋಕ ಹದ್ಲಿ, ಪರಿಸರ ಅಭಿಯಂತರರಾದ ಆನಂದ ಬದಿ, ಆರೋಗ್ಯ ನಿರೀಕ್ಷಕ ಎಂ.ಎಂ. ಮಕಾನದಾರ ಸೇರಿದಂತೆ ಪೌರಕಾರ್ಮಿಕರು, ವಕೀಲ ವೃಂದದವರು ಹಾಗೂ ನ್ಯಾಯಾಲಯ ಸಿಬ್ಬಂದಿ ಹಾಜರಿದ್ದರು..

### ವಿಶ್ವ ಹೃದಯ ದಿನಾಚರಣೆ ಜಾಗೃತಿ ಕಾರ್ಯಕ್ರಮದಲ್ಲಿ ಡಾ.ಲಿಂಗರಾಜು

# ಪ್ರತಿಯೊಬ್ಬರು ಹೃದಯದ ಆರೋಗ್ಯದ ಕಾಳಜಿ ವಹಿಸಿ

**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಹೃದಯವು ಮಾನವ ದೇಹದ ಪ್ರಮುಖ ಅಂಗಾಗಳಲ್ಲಿ ಒಂದಾಗಿದೆ. ಅದರ ಅಸಮರ್ಪಕ ಕಾರ್ಯವು ಮಾರಣಾಂತಿಕತೆಗೆ ಕಾರಣವಾಗಬಹುದು. ಆದ ಕಾರಣ ಪ್ರತಿಯೊಬ್ಬರು ಹೃದಯದ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು ಬಹಳ ಅವಶ್ಯಕವಾಗಿದೆ ಎಂದು ಡಿಎಚ್‌ಒ ಡಾ.ಲಿಂಗರಾಜು ಕರೆ ನೀಡಿದರು.



ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜನಲ್ಲಿ ನಡೆದ ವಿಶ್ವ ಹೃದಯ ದಿನದ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹೃದಯ ರಕ್ತನಾಳದ ಆರೋಗ್ಯ ಮತ್ತು ಕೆಲವು ಜೀವನಶೈಲಿಯ ಅಭ್ಯಾಸಗಳ ಬಗ್ಗೆ ಅರಿವಿನ ಕೊರತೆಯಿಂದಾಗಿ ಹೃದಯ ರಕ್ತನಾಳದ ಕಾಯಿಲೆಗಳು ಮರಣಕ್ಕೆ ಪ್ರಮುಖ ಕಾರಣಗಳಾಗಿರುತ್ತವೆ. ಅರಂಭಿಕ ಚಿನ್ಹೆಗಳು ಮತ್ತು ರೋಗ ಲಕ್ಷಣಗಳನ್ನು ಅರ್ಥವಾಡಿಕೊಳ್ಳುವುದು ಹಾಗೂ ತೊಡಕುಗಳನ್ನು ತಪ್ಪಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವುದು ಜಡ ಜೀವನ ಶೈಲಿಯನ್ನು ತಪ್ಪಿಸುವುದು, ಜೀವನ ಶೈಲಿಯ ತೊಡಗಿಸಿಕೊಳ್ಳಬೇಕು ಎಂದರು.

ಜಿಲ್ಲಾ ಸರ್ವೇಕ್ಷಣಾ ಅಧಿಕಾರಿ ಡಾ.ನಂದಕುಮಾರ ಮಾತನಾಡಿ, ವಿಶ್ವ ಹೃದಯ ದಿನಾಚರಣೆಯ ಅಂಗವಾಗಿ ಚಟುವಟಿಕೆಗೆ ಹೃದಯವನ್ನು ಬಳಸಿ" ಎಂಬ ಘೋಷವಾಕ್ಯಕ್ಕೆ ಪೂರಕವಾಗಿರುವ ಆಹಾರ ವಿಹಾರ ಮತ್ತು ದೈನಂದಿನ ಜೀವನ ಶೈಲಿಯ ಬಗ್ಗೆ ತೀಳಿಸಿದರು. ಡಾ.ಪುನೀತ ರಾಜಕುಮಾರ ಹೃದಯ ಜ್ಯೋತಿ ಯೋಜನೆಯು ಜಿಲ್ಲೆಯಲ್ಲಿ ಅನುಷ್ಠಾನಗೊಂಡಿದ್ದು, ಇದರ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಗಣಪತಿ ಲಮಾಣಿ, ಜಿಲ್ಲಾ ಕುಷ್ಠರೋಗ ನಿರ್ಮೂಲನ ಅಧಿಕಾರಿ ಡಾ.ಪ್ರಕಾಶ, ದೈಹಿಕ ಶಿಕ್ಷಣ ನಿರ್ದೇಶಕರು ಹಾಗೂ ರೆಡ್ ಕ್ರಾಸ್ ಘಟಕದ ನಿರ್ದೇಶಕ ಡಾ.ಪ್ರದೀಪ ಕುಮಾರ, ಐ.ಕ್ಯೂ. ಎಸ್.ಸಿ ಸನ್ ಸಂಚಾಲಕ ಡಾ. ಅಶೋಕ ಕುಮಾರ, ಉಪನ್ಯಾಸಕ ಡಾ.ನರಸಿಂಹ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಲ್.ವಿ ಸಜ್ಜನರ್, ಡಾ.ಜಯಶ್ರೀ ಸೇರಿದಂತೆ ಎನ್.ಸಿ.ಡಿ. ಕ್ಲಿನಿಕ್ ಸಿಬ್ಬಂದಿಗಳು, ಜಿಲ್ಲಾ ಎನ್.ಟಿ.ಸಿ.ಪಿ ಕಾರ್ಯಕ್ರಮದ ಸಿಬ್ಬಂದಿಗಳು ಮತ್ತು ಜಿಲ್ಲಾ ಸರ್ವೇಕ್ಷಣಾ ಘಟಕದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಬಡವರಿಗೆ ಆಹಾರ ಸಾಮಗ್ರಿಗಳ ಕಿಟ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕ್ರಾಂತಿ ಸೇನಾ ಸಂಘಟನೆಯ ವತಿಯಿಂದ ದಾನಿಗಳ ಸಹಕಾರದೊಂದಿಗೆ ಬಡ ಕುಟುಂಬಕ್ಕೆ ಅಗತ್ಯವಿರುವ ಆಹಾರ ಸಾಮಗ್ರಿಗಳ ಕಿಟ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಕ್ರಾಂತಿ ಸೇನಾ ಜಿಲ್ಲಾ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ ಮಾತನಾಡಿ, ಕ್ರಾಂತಿ ಸೇನಾ ಸಂಘಟನೆ ವತಿಯಿಂದ ಬಡ ಕುಟುಂಬಕ್ಕೆ ಪ್ರತಿ ತಿಂಗಳು ಆಹಾರ ಸಾಮಗ್ರಿಗಳ ಕಿಟ್ ನೀಡುತ್ತಾ ಬಂದಿದ್ದೇವೆ. ಇದು 27ನೇ ತಿಂಗಳು, ಗದಗ ನಗರದ ಶ್ರೀ ಜೋಡ ಮಾರುತಿ ದೇವಸ್ಥಾನದ ಹತ್ತಿರ ಇರುವ ಮಂಗಲಾ ಹಿರೇಮಠರ ಕುಟುಂಬಕ್ಕೆ ಆಹಾರ ಸಾಮಗ್ರಿಗಳ ಕಿಟ್ ನೀಡಲಾಗಿದೆ. ಬಡವರ ಸೇವೆಯೇ ದೇವರ ಸೇವೆ ಎಂದು ಭಾವಿಸಿ ಕೆಲವು ದಾನಿಗಳಿಗೆ ಕಾಣಿಕೆ ಡಬ್ಬಿ ನೀಡಲಾಗಿದೆ. ಅದರಲ್ಲಿ ಸಂಗ್ರಹವಾದ ಹಣದಿಂದ ನಾವು ಕ್ರಾಂತಿ ಸೇನಾ ಸಂಘಟನೆಯ ವತಿಯಿಂದ ಪ್ರತಿ ತಿಂಗಳು ಒಂದು ಬಡ ಕುಟುಂಬಕ್ಕೆ ಅಗತ್ಯವಿರುವ ಆಹಾರ ಸಾಮಗ್ರಿಗಳ ವಿತರಣೆ ಮಾಡುತ್ತೇವೆ ಎಂದರು.

ಆಸಕ್ತರು ಕಾಣಿಕೆ ಡಬ್ಬಿಯನ್ನು ಪಡೆದು, ನಿಮ್ಮ ಕೈಲಾದ ಸೇವೆಯನ್ನು ನೀಡಿ ಬಡವರ ಸೇವೆಗೆ ಕೈ ಜೋಡಿಸಿ ಅಗತ್ಯವಿರುವವರಿಗೆ ಆಸರೆಯಾಗೋಣ. ಕಾಣಿಕೆ ಡಬ್ಬಿ ಬೇಕಾದಲ್ಲಿ 8548954382 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ತಿಳಿಸಿದರು.



ಗದಗ ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಪ್ರೊ. ಅನುಪಮಾ, ಪ್ರೊ. ಉಮಾ, ಪ್ರೊ. ಗೀತಾ, ಪ್ರೊ. ರೇಖಾ, ಪ್ರೊ. ಅಶ್ವಿನಿ ಅವರು ದಸರಾ ಹಬ್ಬದ ನಿಮಿತ್ತ ಹಳದಿ ಬಣ್ಣದ ಸೀರೆ ಧರಿಸಿ ಸಂಭ್ರಮಿಸಿದರು.

# ಅ.5ರಂದು ಪ್ರಾತಿನಿಧ್ಯ ಸಮಾವೇಶ : ಡಿ.ಹೆಚ್. ಪೂಜಾರ್



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಭೂಮಿ ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯಿಂದ ಭೂಮಿ ವಸತಿ ಹಕ್ಕು ವಂಚಿತರ ಪ್ರಾತಿನಿಧ್ಯ ಸಮಾವೇಶ ಅ.5 ರಂದು ಬೆ.10ಗಂಟೆಗೆ ಬೆಂಗಳೂರಿನ ಗಾಂಧಿ ಭವನದಲ್ಲಿ ಜರುಗಲಿದೆ ಎಂದು ಭೂಮಿ ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ಮುಖಂಡ ಡಿ.ಎಚ್. ಪೂಜಾರ ಹೇಳಿದರು.

ನಗರದ ಕೆಯೂಡಬ್ಲ್ಯೂಜೆ ಪತ್ರಿಕಾಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿ ಗೌರವದಿಂದ ಬಾಳುವಷ್ಟು ಭೂಮಿ ಮತ್ತು ಘನತೆಯಿಂದ ಬದುಕುವಂತ ವಸತಿ ಪ್ರತಿಯೊಬ್ಬರ ಹಕ್ಕು 2018 ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯರ ಅಧ್ಯಕ್ಷತೆಯಲ್ಲಿ, ದೊರೆಸ್ವಾಮಿ ನೇತೃತ್ವದಲ್ಲಿ ಬಡಜನರಿಗೆ ಭೂಮಿ ಮತ್ತು ವಸತಿ ಹಕ್ಕನ್ನು ಖಾತ್ರಿ ಗೊಳಿಸಲು ಸಮಗ್ರ ಯೋಜನೆ ರೂಪಗೊಂಡಿತ್ತು, ಅದರ ಜಾರಿಗೆ ಉನ್ನತ ಮಟ್ಟದ ಸಮಿತಿಯು ಸಹ ರಚಿಸಲಾಗಿತ್ತು, ನಂತರ ವಿಧಾನಸಭೆ ಚುನಾವಣೆಗಳು ನಡೆದು ರಾಜ್ಯದ ರಾಜ-ಕಾರಣ ಬದಲಾಯಿತು, ಬಡವರ ವಿರೋಧಿ ನಿಲುವು ತಾಳಿದ ಬಿಜೆಪಿ ಹಣವಂತರ ಪರವಾದ ತಿದ್ದುಪಡಿ ಭೂ ಕಾಯ್ದೆ ತಂದಿತು ಹೊರತು, ಬಡವರ ಹಕ್ಕನ್ನು ಮಾನ್ಯಗೊಳಿಸುವ ಯಾವ ಕೆಲಸ ಮಾಡಲಿಲ್ಲ ಎಂದರು.

ಹೋರಾಟ ಸಮಿತಿಯ ಮುಖಂಡ ಕರಿಯಪ್ಪ ಗುಡಿಮನಿ ಮಾತನಾಡಿ ದೇಶದ ಆರ್ಥಿಕತೆ ಕಾರ್ಪೊರೇಟ್ ಕಂಪನಿಗಳ ಕೈಗೆ ಒಪ್ಪಿಸಿರುವ ಕೇಂದ್ರ ಸರ್ಕಾರ ಕೈಗಾರಿಕಾ ನೀತಿಯಿಂದಾಗಿ ದೇಶದ ರೈತರು ಇದ್ದ ಬಿದ್ದ ಭೂಮಿ ಕಳೆದುಕೊಂಡಿದ್ದಾರೆ, ರಾಜ್ಯದಲ್ಲಿ ಕೈಗಾರಿಕಾ ಹೆಸರಲ್ಲಿ ಸಾವಿರಾರು ಎಕರೆ ಫಲವತ್ತಾದ ಭೂಮಿ ಕಿತ್ತುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಇದಕ್ಕೆ ರೈತರಿಂದಲೂ ಪ್ರತಿರೋಧಗಳು ಬೆಳೆಯುತ್ತಿವೆ ಎಂದರು. ಬೆಂಗಳೂರಿನಲ್ಲಿ ನಡೆಯುವ ಈ ಸಮಾವೇಶಕ್ಕೆ ಜಿಲ್ಲೆಯಿಂದ 150 ಜನ ಪಾಲ್ಗೊಳ್ಳುವ ನೀರಿಕ್ಷೆ ಇದೆ ಎಂದರು.

ಈ ಸಂದರ್ಭದಲ್ಲಿ ಮುಖಂಡರಾದ ಬಸವರಾಜ್ ನರೇಗಲ್, ಶೋಭಾ, ಮುದುಕಪ್ಪ ಹೊಸಮನಿ, ಹನುಮಂತಪ್ಪ ದೊಡ್ಡಮನಿ, ಮಂಜುನಾಥ್ ಆಗೋಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅರ್ಜಿ ಸಲ್ಲಿಕೆ ಅವಧಿ ಹೆಚ್ಚಿಸಿ

■ವಿಜಯಸಾಕ್ಷಿ ಸುದ್ದಿ, ಗದಗ



ಕಳೆದ ಹಲವಾರು ದಿನಗಳಿಂದ ರಾಜ್ಯಾದ್ಯಂತ ಕಂದಾಯ ಇಲಾಖೆಯ ನೌಕರರು ತಮ್ಮ ಬೇಡಿಕೆಗಳಿಗಾಗಿ ಮುಷ್ಕರದಲ್ಲಿ ತೊಡಗಿರುವುದರಿಂದ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಜಾತಿ, ಆದಾಯ, ರಹವಾಸಿ ಪ್ರಮಾಣಪತ್ರಕ್ಕೆ ಅರ್ಜಿ ಸಲ್ಲಿಸಿದರೆ ಅವರಿಗೆ ಸಮಯಕ್ಕೆ ಸರಿಯಾಗಿ ಸಿಗದ ಕಾರಣ ರಾಜ್ಯ ಸರ್ಕಾರದ ಸ್ಕಾಲರ್‌ಶಿಪ್ ಸೇರಿದಂತೆ ವಿವಿಧ ಸರ್ಕಾರದ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬೇಕಾದ ನಿಗದಿತ ದಿನಾಂಕ ಮುಗಿಯುತ್ತಿದೆ.

ಸದರಿ ದಿನಾಂಕಗಳನ್ನು ಇನ್ನೂ ಒಂದು ತಿಂಗಳ ಕಾಲ ಹೆಚ್ಚಿಸಿ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡಬೇಕು ಮತ್ತು ಸಂಧ್ಯಾ ಸುರಕ್ಷಾ ಯೋಜನೆಯ ವೃದ್ಧಾಪ್ಯ ವೇತನ ಅರ್ಜಿಯನ್ನು ಪುನಃ ಪ್ರಾರಂಭಿಸಬೇಕೆಂದು ಗದಗ-ಬೆಟಗೇರಿ ನಗರಸಭೆ ಮಾಜಿ ಸದಸ್ಯ, ಕಾಂಗ್ರೆಸ್ ಮುಖಂಡ ಚಾಂದಸಾಬ ಕೊಟ್ಟೂರ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

### ನರೇಗಾ ಕೆಲಸಗಳಲ್ಲಿ ಚುರುಕುತನ ಕಳೆದುಕೊಂಡ ಕಡಕೋಳ ಗ್ರಾ.ಪಂ

# ನಿಗದಿತ ಗುರಿ ಸಾಧನೆಯಲ್ಲಿ ಹಿಂದೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕು ಕೇಂದ್ರದಿಂದ ಕೆಲವೇ ಕಿಮೀ.ಗಳ ಅಂತರದಲ್ಲಿರುವ ಕಡಕೋಳ ಗ್ರಾಮ ಪಂಚಾಯಿತಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ನೀಡಿದ ನಿಗದಿತ ಗುರಿ ತಲುಪುವಲ್ಲಿ ಹಿಂದೆಯೇ ಇದ್ದು, ಇಲ್ಲಿಯ ನರೇಗಾ ಕೆಲಸಗಳು ಚುರುಕು ಪಡೆದು ನೀಡಿದ ಗುರಿ ತಲುಪುವುದು ಯಾವಾಗ ಎಂಬ ಪ್ರಶ್ನೆ ಕಾಡುವಂತಾಗಿದೆ.

ಪ್ರಸಕ್ತ ಸಾಲಿನಲ್ಲಿ ಕಡಕೋಳ ಗ್ರಾ.ಪಂ ಕೂಲಿಕಾರ್ಮಿಕರಿಂದ 27169 ಮಾನವ ದಿನಗಳ ಟಾರ್ಗೆಟ್ ಹೊಂದಿದೆ. ಸೆ.23ಕ್ಕೆ ಶಿರಹಟ್ಟಿ ತಾ.ಪಂ ಸಹಾಯಕ ನಿರ್ದೇಶಕರು ನೀಡಿದ ಅಂಕಿ-ಅಂಶದ ಪ್ರಕಾರ, ಗ್ರಾ.ಪಂ ಇಲ್ಲಿಯವರೆಗೆ 18520 ಮಾನವ ದಿನಗಳ ಗುರಿ ತಲುಪಬೇಕಿತ್ತು. ಆದರೆ ಕೇವಲ 6434 ಮಾನವ ದಿನಗಳನ್ನು ಮಾತ್ರ ಪೂರೈಸಿದೆ. ಗ್ರಾ.ಪಂ ವತಿಯಿಂದ 13 ಮನೆಗಳ ನಿರ್ಮಾಣದ ಕಾರ್ಯ ಹಾಗೂ 6 ದನದ ದೊಡ್ಡಿ ನಿರ್ಮಾಣ ಪ್ರಗತಿಯಲ್ಲಿದ್ದು, ಜಲ್ಲಿಗೇರಿ ಮೇನ್ ಗೇಟ್‌ನಿಂದ ರಂಗಮಂದಿರದವರೆಗೆ ಸಿಸಿ ರಸ್ತೆ, ಹಳೆ ಪ್ರಾಥಮಿಕ ಶಾಲೆಯಲ್ಲಿ ಆಟದ ಮೈದಾನ ಅಭಿವೃದ್ಧಿ, ಕೆಪಿಎಸ್‌ನಲ್ಲಿ ಶೌಚಾಲಯ, ಕಾಲೇಜು ಕಾಂಪೌಂಡ್ ನಿರ್ಮಾಣ ಪ್ರಗತಿಯಲ್ಲಿದ್ದಾಗ್ಯೂ ಗ್ರಾ.ಪಂಗೆ ಗುರಿ ತಲುಪಲು ಸಾಧ್ಯವಾಗಿಲ್ಲ. 15ನೇ ಹಣಕಾಸು ಯೋಜನೆಯಡಿ 10 ಕೆಲಸಗಳಲ್ಲಿ 2 ಪೂರ್ಣಗೊಂಡಿದ್ದು, ಇನ್ನೂ 8 ಪ್ರಗತಿಯಲ್ಲಿವೆ.




ಜೆಜೆಎಂ ಯೋಜನೆ ಮೂಲಕ ಮನೆ ಮನೆಗೆ ನೀರು ಸಂಪರ್ಕ ಕಲ್ಪಿಸುವ ಯೋಜನೆಯು ಕಡಕೋಳ ಗ್ರಾ.ಪಂ ಕೇಂದ್ರಸ್ಥಾನದಲ್ಲಿಯೇ ಇಲ್ಲಿಯವರೆಗೂ ಪೂರ್ಣಗೊಂಡಿಲ್ಲ. ಸಾರ್ವಜನಿಕರ ತೆರಿಗೆ ಹಣ, ಸರಕಾರದ ಸದುದ್ದೇಶ ಇಲ್ಲಿ ಈಡೇರದೇ ಕೇವಲ ಅಂಕಿ-ಅಂಶಗಳಿಗೆ ಮಾತ್ರ ಯೋಜನೆಗಳು ಸಿಮೀತವಾದಂತಿದೆ.

ನರೇಗಾ ಯೋಜನೆಯಡಿ ಕೂಲಿಕಾರ್ಮಿಕರ ಭಾಗವಹಿಸುವಕೆ, ಸರಕಾರದ ಸೌಲಭ್ಯಗಳು ಹೀಗೆ ಹತ್ತು ಹಲವು ಉಪಯುಕ್ತ ಮಾಹಿತಿಯನ್ನು ನೀಡಬೇಕಾದ ಸಿಬ್ಬಂದಿಗಳು ಗ್ರಾಮ ಪಂಚಾಯತ ಮಟ್ಟದಲ್ಲಿ ಸಮರ್ಪಕವಾಗಿ ಜಾಗೃತಿ ಮೂಡಿಸದೇ ಇರುವದರಿಂದ ಗ್ರಾಮ ಪಂಚಾಯಿತಿಯಲ್ಲಿ ನರೇಗಾ ಕಾಮಗಾರಿಯ ಗುರಿ ತಲುಪಲು ಸಾಧ್ಯವಾಗುತ್ತಿಲ್ಲ ಎಂದು ಇಲ್ಲಿಯ ಗ್ರಾ.ಪಂ ಸದಸ್ಯ ಮಾರ್ತಾಂಡಪ್ಪ ಹಾದಿಮನಿ ಆರೋಪಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಗ್ರಾ.ಪಂ ಪಿಡಿಓ ಎಸ್.ಟಿ. ಕಪ್ಪಲಿ, ಗ್ರಾ.ಪಂನಲ್ಲಿ 2024-25ನೇ ಸಾಲಿನ ಕೆಲಸಗಳು ಪ್ರಗತಿಯಲ್ಲಿ ಭಾಗಶಃ ತೃಪ್ತಿಕರವಾಗಿದೆ. ಈ ಬಗ್ಗೆ ಸಂಬಂಧಿಸಿದ ಆರ್‌ಡಬ್ಲ್ಯುಎಸ್ ಎಇಇಗೆ 2023ರ ಅ.10ರಂದೇ ಪತ್ರ ಬರೆಯಲಾಗಿದೆ ಎಂದರು.

ಗ್ರಾ.ಪಂ ಸದಸ್ಯ ಮಾತಾಂಡಪ್ಪ ಹಾದಿಮನಿ ಪ್ರತಿಕ್ರಿಯಿಸಿ, ಜಲ್ಲಿಗೇರಿ ಗ್ರಾಮಕ್ಕೆ ಒಂದೇ ಬೋರ್‌ವೆಲ್ ವ್ಯವಸ್ಥೆ ಇದ್ದು, ಇದು ದುರಸ್ತಿಗೆ ಬಂದರೆ ಜನತೆಗೆ ಕುಡಿಯುವ ನೀರಿನ ತೊಂದರೆಯಾಗುತ್ತದೆ. ನರೇಗಾ ಜಾಗೃತಿ ಗ್ರಾ.ಪಂ ಮಟ್ಟದಲ್ಲಿ ಅಷ್ಟಕ್ಕಷ್ಟೇ ಇದೆ. ಸಿಬ್ಬಂದಿಗಳ ಮುಖವನ್ನೇ ನಾವು ನೋಡಿಲ್ಲ. ಸಂಬಂಧಿಸಿದ ಅಧಿಕಾರಿಗಳು ಈ ಬಗ್ಗೆ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳು ನಡೆಯುವಂತೆ ನಿರ್ದೇಶಿಸಬೇಕೆಂದರು.

# ಕೋಟ್ಪಾ ಕಾಯ್ದೆಯಡಿ ದಾಳಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಪೊಲೀಸ್ ಅಧೀಕ್ಷಕರು ಹಾಗೂ ಹೆಚ್ಚುವರಿ ಪೊಲೀಸ್ ಅಧೀಕ್ಷಕರ ಮಾರ್ಗದರ್ಶನದಲ್ಲಿ ಜಿಲ್ಲೆಯಾದ್ಯಂತ ಅಕ್ಟೋಬರ್2ರಂದು ಮಹಾತ್ಮ ಗಾಂಧಿ ಜಯಂತಿಯ ನಿಮಿತ್ತ ತಂಬಾಕು ಮುಕ್ತ ಅಭಿಯಾನ ಹಮ್ಮಿಕೊಂಡು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಹಾಗೂ ಶಾಲಾ/ಕಾಲೇಜು ಅವರಣದ ನಿಗದಿತ ಅಂತರದಲ್ಲಿ ಇರುವ ಅಂಗಡಿ /ಪಾನ್‌ಶಾಪ್‌ಗಳಿಗೆ ಅಧಿಕಾರಿ ಮತ್ತು ಸಿಬ್ಬಂದಿಗಳು ದಾಳಿ ಮಾಡಿ ಪರಿಶೀಲನೆ ನಡೆಸಿದರು.

ಜಿಲ್ಲೆಯ್ಯಾದಂತ ಕೋಟ್ಪಾ ಕಾಯ್ದೆಯಡಿ ಒಟ್ಟು 1629 ಪ್ರಕರಣಗಳನ್ನು ದಾಖಲಿಸಿದರಲ್ಲದೆ, ನಿಷೇಧಿತ ಪ್ರದೇಶದಲ್ಲಿ ರೂಢಿಗತವಾಗಿ ತಂಬಾಕು ಪದಾರ್ಥಗಳನ್ನು ಮಾರುವ ವ್ಯಕ್ತಿಗಳ ಮೇಲೆ ಬಿ.ಎನ್.ಎಸ್.ಎಸ್. 129ರ ಕಾಯ್ದೆ ಅಡಿ 24 ಪ್ರಕರಣಗಳನ್ನು ದಾಖಲಿಸಿಕೊಂಡು ತಂಬಾಕು ಮುಕ್ತ ಅಭಿಯಾನವನ್ನು ಯಶಸ್ವಿಗೊಳಿಸಿದರು.

ಈ ಕಾರ್ಯವನ್ನು ಪೊಲೀಸ್ ಅಧೀಕ್ಷಕರು ಹಾಗೂ ಹೆಚ್ಚುವರಿ ಪೊಲೀಸ್ ಅಧೀಕ್ಷಕರು ಶ್ಲಾಘಿಸಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

# ವೀರ ಯೋಧನಿಗೆ ಅದ್ದೂರಿ ಸ್ವಾಗತ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸುದೀರ್ಘ 24 ವರ್ಷಗಳ ಕಾಲ ಭಾರತ ದೇಶದ ಗಡಿಗಳಲ್ಲಿ ಸೇವೆ ಸಲ್ಲಿಸಿ ತವರಿಗೆ ಮರಳಿದ ಸಮೀಪದ ಯಳವತ್ತಿ ಗ್ರಾಮದ ಯೋಧ ಯಲ್ಲಪ್ಪ ರಾಮಪ್ಪ ಮಡ್ಡಿ ಅವರನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಇವರು ತಮ್ಮ ಪಿಯುಸಿ ಪೂರೈಸಿದ ನಂತರ 2000ನೇ ಸಾಲಿನಲ್ಲಿ ಮದ್ರಾಸ್ ಇಂಡಿಯನ್ ಆರ್ಮಿ ಗ್ರುಪ್‌ಗೆ ಸೇರಿ, ಅಲ್ಲಿಂದ ಇಲ್ಲಿಯವರೆಗೆ 24 ವರ್ಷಗಳ ಕಾಲ ಭಾರತಾಂಬೆಯ ಸೇವೆ ಮಾಡಿದ್ದಾರೆ. ಸೇವೆಗೆ ಸೇರಿದೆ ಕೂಡಲೇ ಕಾರ್ಗಿಲ್ ಯುದ್ಧದ ಸಲುವಾಗಿ ರಾಜಸ್ಥಾನದ ಕಾರ್ಗಿಲ್ ಲೊಕೇಶನ ಬಾರ್ಡಮಿರ್ ಹಾಗೂ ಗಂಗಾನಗರ ಇವರನ್ನು ಕಳುಹಿಸಲಾಯಿತು.

2017ರಿಂದ 2020ರವರೆಗೆ ಗುಜರಾತನ ಓ.ಎನ್.ಜಿ.ಸಿ ಕ್ಯಾಂಪ್‌ನಲ್ಲಿ ಸಿವಿಲ್ ಸ್ಟಾಫ್ ಟ್ರೈನಿಂಗ್ ಇನ್‌ಸ್ಟ್ರಕ್ಟರ್ ಆಗಿ ಸೇವೆ ಸಲ್ಲಿಸಿದ್ದಾರೆ. 2020ರಿಂದ 2023ರ ವರೆಗೆ ನಾಗಾಲ್ಯಾಂಡ್‌ನ ದಿಮ್ಮಪುರ್ ಕ್ಯಾಂಪ್‌ಲ್ಲಿ ಇವರನ್ನು ಸೇವೆಗೆ ನಿಯೋಜಿಸಲಾಯಿತು. 2023ರಿಂದ ಸೆಪ್ಟೆಂಬರ್ 2024ರವರೆಗೆ ಇವರು ಸೇವೆ ಸಲ್ಲಿಸಿ ಇದೀಗ ನಿವೃತ್ತಿಯಾಗಿ ತವರೂರಿಗೆ ಮರಳಿದ್ದಾರೆ.

ಯೋಧನನ್ನು ಗ್ರಾಮಸ್ಥರು ಆತ್ಮೀಯವಾಗಿ ಬರಮಾಡಿಕೊಂಡರು. ಗ್ರಾಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಹಣೆಗೆ ತಿಲಕವನ್ನಿಟ್ಟು ಆರತಿ ಬೆಳಗಿ ಸ್ವಾಗತಿಸಿ, ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು. ಗ್ರಾಮದ ಅರಬಿಂದೋ ಶಾಲೆ, ಜನನಿ ಶಾಲೆ, ಸರಕಾರಿ ಹೆಣ್ಣು ಮಕ್ಕಳ ಶಾಲೆ, ಜಗದ್ಗುರು ಫಕೀರೇಶ್ವರ ಚನ್ನವೀರೇಶ್ವರ ಪ್ರೌಢಶಾಲೆ ಸೇರಿದಂತೆ ನೂರಾರು ಮಕ್ಕಳು ಯೋಧನಿಗೆ ಜಯಕಾರ ಕೂಗುತ್ತಾ, ರಾಷ್ಟ್ರಗೀತೆಯನ್ನು ಹೇಳುತ್ತಾ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಗ್ರಾಮದ ಸಮಸ್ತ ನಾಗರಿಕರು, ಹಿರಿಯರು, ಮಕ್ಕಳು, ಸ್ನೇಹಿತರ ಬಳಗದವರು ಹಾಜರಿದ್ದರು.

# ವಾಲ್ಮೀಕಿ ಜಯಂತ್ಯುತ್ಸವ ಅ.21ಕ್ಕೆ ಆಚರಣೆ

■ವಿಜಯಸಾಕ್ಷಿ ಸುದ್ದಿ, ರೋಣ

ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವವನ್ನು ಈ ಬಾರಿ ಅ.17ರ ಬದಲಾಗಿ ಅ.21ಕ್ಕೆ ಆಚರಿಸಲಾಗುವುದು ಎಂದು ಸಮಾಜದ ತಾಲೂಕಾಧ್ಯಕ್ಷ ಬಸವರಾಜ ತಳವಾರ ಹೇಳಿದರು.

ಅವರು ಗುರುವಾರ ತಹಸೀಲ್ದಾರ್ ಸಭಾಂಗಣದಲ್ಲಿ ತಹಸೀಲ್ದಾರ್ ನಾಗರಾಜ ಕೆ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಅ.17ರಂದು ಹುಣ್ಣಿಮೆಯಿದ್ದು, ಸಮಾಜದ ಅನೇಕರು ಯಲ್ಲಮ್ಮನ ಗುಡ್ಡ ಸೇರಿದಂತೆ ಇತರೆ ಧಾರ್ಮಿಕ ಸ್ಥಳಗಳಿಗೆ ತೆರಳುತ್ತಾರೆ. ಹೀಗಾಗಿ ಸಮಾಜದ ವತಿಯಿಂದ ಮಹರ್ಷಿ ವಾಲ್ಮೀಕಿಯವರ ಜಯಂತ್ಯುತ್ಸವವನ್ನು ಅ.17ರ ಬದಲಾಗಿ ಅ.21ರಂದು ಹಮ್ಮಿಕೊಳ್ಳಲಾಗುವುದು ಎಂದ ಅವರು, ಸರಕಾರದ ನಿರ್ದೇಶನದಂತೆ ಅ.17ರಂದೇ ಸರಕಾರಿ ಕಚೇರಿಗಳಲ್ಲಿ ಜಯಂತ್ಯುತ್ಸವ ನಡೆಯಲಿ ಎಂದರು.

ತಹಸೀಲ್ದಾರ್ ನಾಗರಾಜ ಕೆ ಮಾತನಾಡಿ, ಸರಕಾರದ ನಿರ್ದೇಶನದಂತೆ ಅ.17ರಂದು ಸರಕಾರಿ ಕಚೇರಿಗಳು ಸೇರಿದಂತೆ ಶಾಲಾ-ಕಾಲೇಜುಗಳಲ್ಲಿ 'ಿವಮಾನವ ಮಹರ್ಷಿ ವಾಲ್ಮೀಕಿಯವರ ಜಯಂತ್ಯುತ್ಸವವನ್ನು ಆಚರಿಸಲಾಗುವುದು. ಸಮಾಜದ ನಿರ್ಧಾರಕ್ಕೆ ಸಹಕರಿಸುವ ಮೂಲಕ ಅ.21ರಂದು ನಡೆಯುವ ಕಾರ್ಯಕ್ರಮದಲ್ಲಿ ತಾಲೂಕಾಡಳಿತ ಭಾಗಿಯಾಗಲಿದೆ. ಅ.17ರಂದು ತಾಲೂಕಾಡಳಿತದಿಂದ ಜರುಗುವ ಪೂಜಾ ಸಮಾರಂಭಕ್ಕೆ ಆಗಮಿಸಬೇಕು ಎಂದು ಕೋರಿದರು.

ಈ ಸಂಧರ್ಭದಲ್ಲಿ ದಲಿತ ಹಾಗೂ ವಾಲ್ಮೀಕಿ ಸಮುದಾಯದ ಮುಖಂಡರು ತಹಸೀಲ್ದಾರ್ ಬಳಿ ಕೆಲ ಸಮಸ್ಯೆಗಳನ್ನು ನಿವೇದನೆ ಮಾಡಿಕೊಂಡು, ಶೀಘ್ರವೇ ಕುಂದು-ಕೊರತೆ ಸಭೆಯನ್ನು ಆಯೋಜನೆ ಮಾಡಿ ಎಂದು ವಿನಂತಿಸಿದರು.

ಪುರಸಭೆ ಅಧ್ಯಕ್ಷೆ ಗೀತಾ ಮಾಡಲಗೇರಿ, ಕುಮಾರ ಗೌಡನ್ನವರ, ಬಸವಂತಪ್ಪ ತಳವಾರ, ಸಂತೋಷ ಕಡಿವಾಲ, ಮೌನೇಶ ಹಾದಿಮನಿ, ಸೋಮು ನಾಗರಾಜ, ಪ್ರಕಾಶ ಹೊಸಳ್ಳಿ ಸೇರಿದಂತೆ ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

### ಅನೈತಿಕ ಚಟುವಟಿಕೆಗಳನ್ನು ನಿಯಂತ್ರಿಸಲು ಗ್ರಾ.ಪಂಗೆ ಒತ್ತಾಯ

# ಗ್ರಾಮ ಸಭೆಯಲ್ಲಿ ಬಹುವಿಧ ಚರ್ಚೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮದ ಶೈಕ್ಷಣಿಕ ಪರಿಸರ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳು ಅನೈತಿಕ ಚಟುವಟಿಕೆಯ ತಾಣಗಳಾಗಿದ್ದು, ಅವುಗಳ ಬಗ್ಗೆ ಗ್ರಾಮ ಪಂಚಾಯಿತಿಯು ಕ್ರಮ ಜರುಗಿಸಿ ಗ್ರಾಮದ ಹಿತ ಕಾಪಾಡಬೇಕೆಂದು ಬುಧವಾರ ನಡೆದ ಗ್ರಾಮ ಸಭೆಯಲ್ಲಿ ಒತ್ತಾಯಿಸಲಾಯಿತು.

ಕಳೆದ ಹಲವು ದಿನಗಳಿಂದ ಶಿಥಿಲಗೊಂಡು ಖಾಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡದಲ್ಲಿ ಅಪ್ರಾಪ್ತರಿಂದ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು, ಈ ಬಗ್ಗೆ ವೈದ್ಯಾಧಿಕಾರಿಗಳು ಗಮನ ಹರಿಸಬೇಕು ಎಂದು ನಾಗಮ್ಮ ಹಾಲಿನವರ ದೂರಿದರು. ಬಿ.ಎಚ್. ಪಾಟೀಲ ಕಾಲೇಜ್, ಸರಕಾರಿ ಶಾಲೆ ಮೈದಾನಗಳಲ್ಲಿ ರಾತ್ರಿ 8ರಿಂದ 10ರವರೆಗೆ ಗ್ರಾಮದ ಪ್ರಭಾವಿ ವ್ಯಕ್ತಿಗಳೇ ಮದ್ಯಪಾನ, ಧೂಮಪಾನ ಮಾಡಿ ಶೈಕ್ಷಣಿಕ ಪರಿಸರವನ್ನು ಹಾಳು ಮಾಡುತ್ತಿದ್ದು, ಪ್ರತಿದಿನ ಪೊಲೀಸ್ ಗಸ್ತು ವ್ಯವಸ್ಥೆ ಕಲ್ಪಿಸಬೇಕೆಂದು ಬಸವರಾಜ ಮುಳ್ಳಾಳ ಇತರರು ಆಕ್ರೋಶ ವ್ಯಕ್ತಪಡಿಸಿದರು.

ಮನರೆಗಾ ಕಾಮಗಾರಿ ಕ್ರಿಯಾ ಯೋಜನೆಯನ್ನು ಜಮೀನು, ಹಳ್ಳ-ಕೊಳ್ಳಗಳಿಗೆ ರೂಪಿಸುವ ಬದಲು ಗ್ರಾಮದ ಶಾಲೆ, ಕಾಲೇಜು, ಕೆರೆಗಳ ಸುತ್ತಮುತ್ತಲಿನ ಪರಿಸರ ಅಭಿವೃದ್ಧಿಗೆ ವಿನಿಯೋಗಿಸಿ ಎಂದು ಮಂಜುನಾಥ ತಡಹಾಳ ಆಗ್ರಹಿಸಿದರು. ತುಂಗಾಭದ್ರಾ ನದಿಯಿಂದ ಗ್ರಾಮದ ಹಾಲಗೊಂಡ ಬಸವೇಶ್ವರ ಕೆರೆ, ದಂಡಿನ ದುರ್ಗಾದೇವಿ ಕೆರೆಯ ತುಂಬಿಸಲು ಗ್ರಾ.ಪಂ ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆಯಬೇಕು



ಎಂದು ರೈತ ಮುಖಂಡ ವೆಂಕಟೇಶ ದೊಂಗಡೆ ಇತರರು ಆಗ್ರಹಿಸಿದರು.

ಲಕ್ಕುಂಡಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಸೇವೆ ನೀಡಲು ಬಂದಿದ್ದ ಅಂಬ್ಯುಲೆನ್ಸ್ ವಾಹನವು ಗದಗ ಜಿಮ್ಸ್‌ನಲ್ಲಿ ಕಳೆದ 6 ತಿಂಗಳಿಂದ ಸೇವೆ ನೀಡುತ್ತಿದೆ. ಇದರಿಂದ ಇಲ್ಲಿಯ ರೋಗಿಗಳಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಗ್ರಾ.ಪಂ ಕ್ರಮ ಜರುಗಿಸಬೇಕು ಎಂದು ಮರಿಯಪ್ಪ ವಡ್ಡರ ಒತ್ತಾಯಿಸಿದರು. ಆಸ್ಪತ್ರೆಯಲ್ಲಿ ರೋಗಿಗಳಿಗೆ ಸಿಬ್ಬಂದಿ ವರ್ಗ ಸರಿಯಾಗಿ ಸ್ಪಂದಿಸುತ್ತಿಲ್ಲ. ಸಿಬ್ಬಂದಿ ಬರುವ ಮತ್ತು ಹೋಗುವ ಸಮಯ ಗೊತ್ತಾಗುತ್ತಿಲ್ಲ. ವೈದ್ಯಾಧಿಕಾರಿಗಳು ಕ್ರಮ ವಹಿಸಬೇಕು ಎಂದು ಗ್ರಾ.ಪಂ ಸದಸ್ಯ ಲಕ್ಷ್ಮಣ ಗುಡಸಲಮನಿ ದೂರಿದರು.

7 ಎಕರೆ ನಿವೇಶನದಲ್ಲಿ ಮೂಲಭೂತ ಸೌಲಭ್ಯ ಒದಗಿಸುವುದು, ಅರ್ಹರಿಗೆ ನಿವೇಶನ ಕೊಡುವುದು, ಸಮರ್ಪಕ ಕುಡಿಯುವ ನೀರು ಪೂರೈಸುವುದು, ಮಾರಾಟ ಮಳಿಗೆ ಟೆಂಡರ್ ಮಾಡುವುದು, ಒತ್ತುವರಿಯಾದ ಗ್ರಾ.ಪಂ ಜಾಗವನ್ನು ವಶಪಡಿಸಿಕೊಳ್ಳುವುದು ಸೇರಿದಂತೆ ಇತರ ವಿಷಯಗಳನ್ನು ಚರ್ಚಿಸಲಾಯಿತು. ಜಿಲ್ಲೆಯಲ್ಲಿಯೇ ದೊಡ್ಡ ಗ್ರಾಮ ಪಂಚಾಯತಿಗೆ ಪೂರ್ಣ ಪ್ರಮಾಣದ ಅಧಿಕಾರಿಗಳನ್ನು ನೇಮಿಸಬೇಕೆಂದು ಗ್ರಾ.ಪಂ ಸದಸ್ಯ ಕುಬೇರಪ್ಪ ಬೆಂತೂರು ಆಗ್ರಹಿಸಿದರು.

ಕಾರ್ಯದರ್ಶಿ ಪ್ರದೀಪ ಆಲೂರು ಮಾತನಾಡಿ, 7 ಎಕರೆ ನಿವೇಶನದಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸಲು ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ. ಇನ್ನು ಮುಂದೆ ಗ್ರಾ.ಪಂ ಕಾರ್ಯಾಲಯದಲ್ಲಿಯೇ ಇ-ಸ್ವತ್ತು ಉತಾರ ಲಭ್ಯವಿದ್ದು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ವೈದ್ಯಾಧಿಕಾರಿ ಅಮೃತ ಹರಿದಾಸ, ರೈತ ಸಂಪರ್ಕ ಅಧಿಕಾರಿ ಈರಣ್ಣ ಗಡಾದ, ಅಂಗನವಾಡಿ ಮೇಲ್ವಿಚಾರಕಿ ಶಾಹಿಧ ಬೇಗಂ ಹತ್ತಿವಾಲೆ ಮಾತನಾಡಿದರು. ಗ್ರಾ.ಪಂ.ನ ಸ್ವಚ್ಛತಾ ಕಾರ್ಮಿಕರನ್ನು ಸನ್ಮಾನಿಸಲಾಯಿತು. ಗ್ರಾ.ಪಂ ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು., ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ, ನೊಡೆಲ್ ಅಧಿಕಾರಿ ಮನೇರೆಗಾ ಸಹಾಯಕ ನಿರ್ದೇಶಕ ಕುಮಾರ ಪೂಜಾರ, ಶಾಲಾ ಮುಖ್ಯೋಪಾಧ್ಯಯರು, ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು. ಎಸ್.ಡಿ.ಎ ತುಕಾರಾಮ ಹುಲಗಣ್ಣವರ ಸ್ವಾಗತಿಸಿ ವಂದಿಸಿದರು.

### ಪ್ಲಾಸ್ಟಿಕ್‌ಗೆ ಬದಲಾಗಿ ಸಕ್ಕರೆ!

ಪ್ಲಾಸ್ಟಿಕ್ ಮುಕ್ತ ಗ್ರಾಮವಾಗಲು ಸಾರ್ವಜನಿಕರು 1 ಕೆ.ಜಿ ಪ್ಲಾಸ್ಟಿಕ್ ಸಂಗ್ರಹಿಸಿ ಕೊಟ್ಟರೆ 1 ಕೆ.ಜಿ ಸಕ್ಕರೆಯನ್ನು ಕೊಡುಗೆ ನೀಡಲಾಗುವುದು. ಗ್ರಾಮದಲ್ಲಿ ಪ್ರಮುಖವಾಗಿ ಕುಡಿವ ನೀರು ಪೂರೈಕೆ ಮಾಡಲು ಹಲವು ಯೋಜನೆಗಳನ್ನು ರೂಪಿಸಲಾಗಿದ್ದು, ಗ್ರಾಮಸ್ಥರ ಸಹಕಾರ ಮುಖ್ಯವಾಗಿದೆ. ಕಸ ವಿಲೇವಾರಿ ಮಾಡಲು ಸಾರ್ವಜನಿಕರು ಹಸಿ ಮತ್ತು ಒಣ ಕಸ ಬೇರ್ಪಡಿಸಬೇಕು. ಶಾಲೆಗಳಿಗೆ ಕುಡಿಯುವ ನೀರು, ಶಾಲಾ ಮಕ್ಕಳಿಗೆ ಸಮರ್ಪಕ ಬಸ್ ವ್ಯವಸ್ಥೆ ಮತ್ತು ಆರೋಗ್ಯ ಕೇಂದ್ರಗಳ ಪರಿಸರ ಸ್ವಚ್ಛತೆಗೆ ಕ್ರಮ ಜರುಗಿಸಲಾಗುವುದು ಎಂದು ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಹೇಳಿದರು.

**ಇಷ್ಟಲಿಂಗ ಮಹಾಪೂಜೆಯನ್ನು ನೆರವೇರಿಸಿದ ರಂಭಾಪುರಿ ಶ್ರೀಗಳು**


# ಧರ್ಮ ಶ್ರದ್ಧೆಗೆ ಸಮಾರಂಭವೇ ಸಾಕ್ಷಿ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ದಾಸೋಹದ ಕಾರ್ಯಕ್ಕೆ ಅಬ್ಬಿಗೇರಿಯ ಜನ ಎಂದಿಗೂ ಮುಂದಿದ್ದು, ಅದಕ್ಕೆಂದೇ ಇಂತಹ ದೊಡ್ಡ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಿ, ಅದರಲ್ಲಿ ಯಶಸ್ವಿಯೂ ಆಗಿದ್ದಾರೆ ಎಂದು ಶ್ರೀಮದ್ ರಂಭಾಪುರಿ ಜಗದ್ಗುರುಗಳು ಹೇಳಿದರು.

ಅಬ್ಬಿಗೇರಿಯ ಹಿರೇಮಠದಲ್ಲಿ ಗುರುವಾರ ಬೆಳಿಗ್ಗೆ ಶರನ್ನವರಾತ್ರಿ ದಸರಾ ಮಹೋತ್ಸವದ ಅಂಗವಾಗಿ ಇಷ್ಟಲಿಂಗ ಮಹಾ ಪೂಜೆಯನ್ನು ನೆರವೇರಿಸಿದ ನಂತರ ನೆರೆದ ಭಕ್ತರನ್ನುದ್ದೇಶಿಸಿ ಆಶೀರ್ವಚನ ನೀಡಿದರು.

ನಿನ್ನೆಯ ದಿನ ಅಬ್ಬಿಗೇರಿ ಮತ್ತು ಸುತ್ತಲಿನ ಭಕ್ತರು ನೀಡಿದ ಸ್ವಾಗತ ಭವ್ಯವಾಗಿತ್ತು. ಭಕ್ತರಲ್ಲಿನ ಧರ್ಮ ಶ್ರದ್ಧೆಗೆ ಈ ಸಮಾರಂಭ ಸಾಕ್ಷಿಯಾಗಿದೆ. ಅಬ್ಬಿಗೇರಿ ಮತ್ತು ಸುತ್ತಲಿನ ಗ್ರಾಮಗಳ ಹಾಗೂ ಗದಗ ಜಿಲ್ಲೆಯ ಎಲ್ಲ ಭಾವಿಕ ಜನಗಳ ಸುದೈವದಿಂದ ಅಬ್ಬಿಗೇರಿಯಂತಹ ಗ್ರಾಮೀಣ ಪ್ರದೇಶದಲ್ಲಿ ಇಂತಹದ್ದೊಂದು ದೊಡ್ಡ ಸಮಾರಂಭ ನಡೆಯುತ್ತಿದೆ. ರಂಭಾಪುರಿ ಪೀಠದ ಗುರುಮನೆ ದಸರಾ ಮಹೋತ್ಸವ ಎಂದರೆ ಅದು



ಎಲ್ಲರಿಗೂ ನೀಗುವುದಲ್ಲ. ಅದನ್ನು ನಿಭಾಯಿಸಲು ಒಪ್ಪಿಕೊಂಡ ನಿಮಗೆಲ್ಲರಿಗೂ ಪೀಠದ ಪರವಾಗಿ ಶುಭ ಆಶೀರ್ವಾದಗಳು ಎಂದರು.

ಈ ದಿನ ನಡೆದ ಈ ಇಷ್ಟಲಿಂಗ ಮಹಾ ಪೂಜೆಯನ್ನು ಮೊದಲ ಬಾರಿಗೆ ಸಾಮೂಹಿಕವಾಗಿ, ಸಾರ್ವಜನಿಕವಾಗಿ ಆಚರಣೆಗೆ ತಂದವರು ಪೀಠದ ಹಿಂದಿನ ಜಗದ್ಗುರುಗಳಾದ ಶ್ರೀಮದ್ ಗಂಗಾಧರ ಮಹಾಸ್ವಾಮಿಗಳು. ಅವರ ನಂತರ ಕಳೆದ 33 ವರ್ಷಗಳಿಂದ ನಾವು ಈ ಪರಂಪರೆಯನ್ನು ಮುಂದುವರೆಸಿಕೊಂಡು ಬಂದಿದ್ದೇವೆ. ಇದರಿಂದ ಸ್ಫೂರ್ತಿ ಪಡೆದು ನೀವುಗಳು ನಿಮ್ಮ ಮನೆಯಲ್ಲಿ ಹತ್ತೇ ನಿಮಿಷ ಶ್ರದ್ಧೆಯಿಂದ ಲಿಂಗ ಪೂಜೆ ಮಾಡಿದರೆ ಖಂಡಿತ ನಿಮಗೆ ಶುಭವಾಗುತ್ತದೆ. ಲಿಂಗಕ್ಕೆ ಎಂದಿಗೂ ಮೈಲಿಗೆ ಎಂಬುದಿಲ್ಲ. ಲಿಂಗವನ್ನು ಸ್ಪರ್ಶಿಸಿದವರೆಲ್ಲರೂ ಪವಿತ್ರರಾಗುತ್ತಾರೆ ಎಂದು ಶ್ರೀಗಳು ತಿಳಿಸಿದರು.

ಯಡಿಯೂರಿನ ಶ್ರೀ ರೇಣುಕ ಶಿವಾಚಾರ್ಯರು ನಡೆಯುವ ಕಾರ್ಯಕ್ರಮಗಳ ಪ್ರಕಟಣೆಯನ್ನು ನೀಡಿದರು. ಇಷ್ಟಲಿಂಗ ಮಹಾ ಪೂಜೆಯಲ್ಲಿ ಕೋಡಿಕೊಪ್ಪ, ಕೋಚಲಾಪೂರ, ತೋಟಗಂಟಿ ಹಾಗೂ ಅಬ್ಬಿಗೇರಿ ಗ್ರಾಮದ 5ನೇ ವಾರ್ಡಿನ ಮಹಿಳೆಯರು ಕುಂಭಗಳನ್ನು ತೆಗೆದುಕೊಂಡು ಬಂದು ಮಹಾ ಪೂಜೆಯಲ್ಲಿ ಪಾಲ್ಗೊಂಡಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ಇಷ್ಟಲಿಂಗ ಮಹಾ ಪೂಜೆಯಲ್ಲಿ ಪಾಲ್ಗೊಳ್ಳುವದೆಂದರೆ ಶಿವನ ಸನ್ನಿಧಿಯಲ್ಲಿ ಇದ್ದಂತೆ. ದೇವರ ಪೂಜೆಯಿಂದ ಮನಸ್ಸು ಪ್ರಸನ್ನಗೊಳ್ಳುತ್ತದೆ. ಪೂರ್ವ ಜನ್ಮದ ಪುಣ್ಯವಿದ್ದರೆ ಮಾತ್ರ ಹರ ಸೇವೆ, ಗುರು ಪೂಜೆಗೆ ಅವಕಾಶ ದೊರಕುತ್ತದೆ. ಇಂದು ನೀವು ಅಂತಹ ಭಾಗ್ಯಶಾಲಿಗಳಾಗಿದ್ದೀರಿ ಎಂದರು.

# ಪ್ರಾಣಿ-ಮಾನವ ಸಂಘರ್ಷ ತಪ್ಪಿಸಲು ಕ್ರಮ

▸▸ ಮೊದಲನೇ ಪುಟದಿಂದ

ಕಾಲ್ನಡಿಗೆ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಸಾಮಾನ್ಯವಾಗಿ ನಮ್ಮ ಜಿಲ್ಲೆಯ ಭೂಪ್ರದೇಶವನ್ನು ನೋಡಿದಾಗ ಶೇ. 33ರಷ್ಟು ಅರಣ್ಯ ಪ್ರದೇಶ ಇರಬೇಕು. ಆದರೆ ಈಗ ಜಿಲ್ಲೆಯಲ್ಲಿ ಶೇ. 8.5ರಷ್ಟು ಅರಣ್ಯವಿದೆ. ಜಿಲ್ಲೆಯಲ್ಲಿ ಕನಿಷ್ಠ ಶೇ. 20ರಷ್ಟು ಭೂಪ್ರದೇಶವನ್ನು ಅರಣ್ಯೀಕರಣಗೊಳಿಸಲು ಅರಣ್ಯ ಇಲಾಖೆಯಿಂದ ನಗರ ಹಾಗೂ ಗ್ರಾಮೀಣ ಪ್ರದೇಶವನ್ನು ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ಜಿಲ್ಲಾ ಉಪ ಅರಣ್ಯಸಂರಕ್ಷಣಾಧಿಕಾರಿ ವಿವೇಕ ಕವರಿ ಪ್ರಾಸ್ತಾವಿಕವಾಗಿ ಮಾತನಾಡಿ, ಕಾಡು ಮತ್ತು ವನ್ಯಜೀವಿಗಳನ್ನು ಮುಂದಿನ ಪೀಳಿಗೆಗೆ ಉಳಿಸಿಕೊಡುವ ಮಹತ್ವದ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಅದಕ್ಕಾಗಿ ವನ್ಯಜೀವಿ ಸಪ್ತಾಹದ ನಿಮಿತ್ತ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ವನ್ಯಜೀವಿಗಳ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮ ಪೂರ್ವದಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಪರಿಮಳಾ ವಿ.ಎಚ್. ವನ್ಯಜೀವಿ ಸಪ್ತಾಹ ಆಚರಣೆಯ ಪ್ರತಿಜ್ಞಾ ವಚನವನ್ನು ಬೋಧಿಸಿ, ಮಾತನಾಡಿದರು.

ಕಾಲ್ನಡಿಗೆ ಜಾಥಾ ಕಾರ್ಯಕ್ರಮದಲ್ಲಿ ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ. ಶಿವಕುಮಾರ, ಕಾರ್ಯಯೋಜನೆ ವಿಭಾಗದ ಡಿಎಫ್‌ಓ ಪಿ.ಎಸ್. ವರೂರ, ವಲಯ ಅರಣ್ಯ ಅಧಿಕಾರಿ ಪ್ರದೀಪ ಎಸ್.ಪವಾರ, ಡಿಆರ್‌ಎಫ್‌ಓ ಯಲ್ಲಾನಾಯಕ ಹಮಾನಿ ಸೇರಿದಂತೆ ಅರಣ್ಯ ಇಲಾಖೆಯ ಧಾರವಾಡ ವೃತ್ತದ ವಿವಿಧ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಪೂರ್ಣಾ, ಎಂಪವರ್ ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಬುಧವಾರ ಜಿಲ್ಲಾಡಳಿತ ಭವನದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆ ಅಂಗವಾಗಿ ಪ್ರೌಢಶಾಲೆ/ಪದವಿಪೂರ್ವ/ ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗಗಳಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಪ್ರಥಮ ಸ್ಥಾನಕ್ಕೆ 3 ಸಾವಿರ ರೂ, ದ್ವಿತೀಯ ಸ್ಥಾನಕ್ಕೆ 2 ಸಾವಿರ ರೂ ಹಾಗೂ ತೃತೀಯ ಸ್ಥಾನಕ್ಕೆ 1 ಸಾವಿರ ರೂ. ಗಳ ನಗದು ಬಹುಮಾನ ಹಾಗೂ ಪ್ರಮಾಣಪತ್ರವನ್ನು ಕಾರ್ಯಕ್ರಮಕ್ಕೆ ಆಗಮಿಸಿದ ಅತಿಥಿಗಳು ವಿತರಿಸಿದರು. ಪ್ರೌಢ ಶಾಲಾ ವಿಭಾಗದಲ್ಲಿ ಪ್ರಥಮ ಸ್ಥಾನ ಮಲ್ಲಿಕಾ ಅಂ.ತಿಪ್ಪಾರೆಡ್ಡಿ, ದ್ವಿತೀಯ ಸ್ಥಾನ ದಿವ್ಯಾ ಬ.ಲಕ್ಕುಂಡಿ, ತೃತೀಯ ಸ್ಥಾನ ಚಿನ್ನಾ ತಾ.ದೊಡ್ಡಮನಿ ಪಡೆದುಕೊಂಡರು.

ಪದವಿಪೂರ್ವ ವಿಭಾಗದಲ್ಲಿ ಪ್ರಥಮ ಸ್ಥಾನ ವಿಜಯಕುಮಾರ ದೊಡ್ಡಮನಿ, ದ್ವಿತೀಯ ಸ್ಥಾನ ಮೀನಾಜ್ ಡಾಲಾಯತ್, ತೃತಿಯ ಸ್ಥಾನ ನಾಗರಾಜ ಬೆನ್ನಳ್ಳಿ ಪಡೆದರು. ಪದವಿ ಮತ್ತು ಸ್ನಾತ್ತಕೋತ್ತರ ವಿಭಾಗದಲ್ಲಿ ಪ್ರಥಮ ಸ್ಥಾನ ಭಾಗ್ಯಶ್ರೀ ವಿ.ಸಿ, ದ್ವೀತಿಯ ಸ್ಥಾನ ರೋಶನಿ ತಳಕಲ್, ತೃತೀಯ ಸ್ಥಾನ ಈರಮ್ಮ ಕುಂದಗೋಳ ಪಡೆದರು.

**ಶಿವಾನುಭವಗೋಷ್ಠಿಯಲ್ಲಿ ಉಪನ್ಯಾಸಕ ಶಶಿಧರ ಮೂಲಿಮನಿ ಅಭಿಮತ**

# ವಿವೇಕಿಗಳು ಎಂದಿಗೂ ಸೋಲುವುದಿಲ್ಲ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜ್ಞಾನ ಮತ್ತು ವಿವೇಕ ಎರಡಕ್ಕೂ ಬಹಳಷ್ಟು ವ್ಯತ್ಯಾಸವಿದೆ. ಇದನ್ನು ತಿಳಿದು ನಡೆಯುವುದೇ ಬದುಕು. ಇದನ್ನು ತಿಳಿದು ನಡೆದರೆ ಮನುಷ್ಯ ತನ್ನ ಜೀವನದಲ್ಲಿ ಖಂಡಿತ ಯಶಸ್ಸು ಕಾಣುತ್ತಾನೆ ಎಂದು ಉಪನ್ಯಾಸಕ ಶಶಿಧರ ಮೂಲಿಮನಿ ಹೇಳಿದರು.



ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ನಡೆದ 54ನೇ ಶಿವಾನುಭವಗೋಷ್ಠಿಯಲ್ಲಿ ಅವರು ಯಶಸ್ಸು ಮತ್ತು ಸಾತ್ವಿಕ ಜೀವನದ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಜ್ಞಾನಕ್ಕೆ ನಾನು ಸಾಧಿಸಿದೆ ಎಂಬ ಹಮ್ಮಿರುತ್ತದೆ. ಆದರೆ ವಿವೇಕಕ್ಕೆ ಈ ಹಮ್ಮು ಇರುವುದಿಲ್ಲ. ವಿವೇಕಿಗಳು ಎಂದಿಗೂ ಜೀವನದಲ್ಲಿ ಸೋಲುವುದಿಲ್ಲ. ಆದರೆ ಜ್ಞಾನವು ಒಮ್ಮೊಮ್ಮೆ ಸೋಲುತ್ತದೆ. ಅದಕ್ಕೆ ಅದರ ಅಹಂಕಾರವೇ ಕಾರಣವಾಗುತ್ತದೆ. ಆದ್ದರಿಂದ ಜ್ಞಾನವಂತರಾಗುವುದರ ಜೊತೆಗೆ ಈ ಜ್ಞಾನವನ್ನು ಹೇಗೆ ಬಳಸಿಕೊಳ್ಳಬೇಕೆಂಬುದರ ಬಗ್ಗೆ ವಿವೇಕವನ್ನು ಹೊಂದುವುದೂ ಮುಖ್ಯವಾಗಿದೆ ಎಂದು ಹೇಳಿದರು.

ವಿವೇಕದಿಂದ ಬದುಕಿ ಈ ಜಗತ್ತನ್ನು ಬೆಳಗಿದ ಮೂವರು ಮಹನೀಯರು ನಮ್ಮ ಕಣ್ಣ ಮುಂದೆ ಆಗಿ ಹೋಗಿದ್ದಾರೆ. ಒಬ್ಬರು ದಾಸೋಹ ಯೋಗಿಗಳು ತುಮಕೂರಿನ ಶ್ರೀ ಸಿದ್ಧಗಂಗಾ ಶ್ರೀಗಳವರು, ಸಂಗೀತಯೋಗಿ ಪಂ. ಪಂಚಾಕ್ಷರಿ ಗವಾಯಿಗಳವರು ಮತ್ತು ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮಿಗಳವರು. ಎಲ್ಲವೂ ನನಗೆ ತಿಳಿದಿದೆ ಎಂಬುದು ಜ್ಞಾನ, ಇನ್ನೂ ತಿಳಿಯುವುದು ಬಹಳಷ್ಟಿದೆ ಎಂಬುದು ವಿವೇಕ. ಇದರಲ್ಲಿ ಯಾವುದನ್ನು ನೀವು ಆಯ್ದುಕೊಳ್ಳುತ್ತೀರೋ ಅದರ ಮೇಲೆ ನಿಮ್ಮ ಬದುಕು ರೂಪುಗೊಳ್ಳುತ್ತದೆ. ಒಬ್ಬ ಮನುಷ್ಯ ಪರಿಪೂರ್ಣನಾಗ ಬೇಕೆಂದರೆ ಎರಡನ್ನೂ ಆಯ್ದು ಕೊಳ್ಳಬೇಕೆಂದು ಹೇಳಿದರು.

ಶಿವಾನುಭವಗೋಷ್ಠಿಯ ದಿವ್ಯ ಸಾನ್ನಿಧ್ಯ ವಹಿಸಿದ್ದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಆಶೀರ್ವಚನ ನೀಡಿ, ದೇವ ಕೊಟ್ಟ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಳ್ಳುವುದು ಸಾತ್ವಿಕ ಜೀವನದ ಮುಖ್ಯ ಲಕ್ಷಣ. ಪರಿಸರವನ್ನು ಕೆಡಿಸದೆ ಉಪಯೋಗಿಸಿ ಅದನ್ನು ಇತರರಿಗೂ ಉಪಯೋಗಿಸಲು ಬಿಡುವುದೂ ಸಹ ಸಾತ್ವಿಕ ಜೀವನವೇ. ಆದರೆ ಎಲ್ಲವನ್ನೂ ನಾನೇ ಉಪಯೋಗಿಸಿಕೊಂಡು, ಇದ್ದುದ್ದನ್ನು ಕೆಡಿಸಿ ಇತರರಿಗೆ ನೀಡುವುದು ಸ್ವಾರ್ಥವೆನ್ನಿಸಿಕೊಳ್ಳುತ್ತದೆ. ಸಂತೋಷವಾಗಿ ಬದುಕುವುದೇ ಯಶಸ್ಸು. ಭ್ರಮೆಯಿಂದ ಮನುಷ್ಯ ಸಾತ್ವಿಕತನವನ್ನು ಕಳೆದುಕೊಳ್ಳುತ್ತಾನೆ. ಪ್ರಪಂಚವನ್ನು ಕೆಡಿಸದಂತೆ ಬದುಕನ್ನು ಕಟ್ಟಿಕೊಳ್ಳಿ ಎಂದು ಶ್ರೀಗಳು ಹೇಳಿದರು.

ಈ ಸಂದರ್ಭದಲ್ಲಿ ಪ್ರಶಸ್ತಿ ಪುರಸ್ಕೃತ ಉಪನ್ಯಾಸಕ ಎಫ್. ಎನ್. ಹುಡೇದ, ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ, ಶಿಕ್ಷಕ ತೋಟಪ್ಪ ಆಡೂರ, ಪ.ಪಂ. ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಬಂಗಾರದ ಪದಕ ಪುರಸ್ಕೃತೆ ಪೂಜಾ ಗ್ರಾಮಪುರೋಹಿತ, ಛಾಯಾಶ್ರೀ ಪ್ರಶಸ್ತಿ ಪುರಸ್ಕೃತ ಮಲ್ಲಯ್ಯ ಗುಂಡಗೋಪುರಮಠ ಅವರನ್ನು ಶ್ರೀಗಳು ಸನ್ಮಾನಿಸಿದರು.

ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ ವೇದಿಕೆಯ ಮೇಲಿದ್ದರು. ಡಾ. ಕಲ್ಲಯ್ಯ ಹಿರೇಮಠ ನಿರೂಪಿಸಿದರು. ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಪರಿಚಯಿಸಿದರು. ಪ್ರಾಚಾರ್ಯ ವೈ.ಸಿ. ಪಾಟೀಲ ಸ್ವಾಗತಿಸಿದರು. ಶಿಕ್ಷಕ ಕೆ.ಐ. ಕೋಳಿವಾಡ ವಂದಿಸಿದರು.

**ಪುಟ್ಟರಾಜ ಸಾಹಿತ್ಯ ಪುರಸ್ಕಾರ ರಾಜ್ಯ ಪ್ರಶಸ್ತಿ ಪ್ರಕಟ**

# ಡಾ. ಸಿದ್ದಗಂಗಪ್ಪರ ಕೃತಿಗೆ ಪ್ರಶಸ್ತಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಬೆಂಗಳೂರಿನ ಡಾ. ಎಚ್.ಎಸ್. ಸಿದ್ದಗಂಗಪ್ಪ ಇವರ 'ಕರ್ನಾಟಕದ ಸಾಧನೆ ಸಂಪನ್ನರು' ಸಾಹಿತ್ಯ ಕೃತಿಯು ಡಾ. ಪಂ. ಪುಟ್ಟರಾಜ ಸಾಹಿತ್ಯ ಪುರಸ್ಕಾರ ರಾಜ್ಯ ಪ್ರಶಸ್ತಿಗೆ ಆಯ್ಕೆಯಾಗಿದೆ. ಈ ಪ್ರಶಸ್ತಿಯು 5 ರಾವಿರ ರೂ. ನಗದು ಬಹುಮಾನ, ಸನ್ಮಾನಪತ್ರ, ನೆನಪಿನ ಕಾಣಿಕೆಗಳನ್ನು ಒಳಗೊಂಡಿರುತ್ತದೆ.

ಅಕ್ಟೋಬರ್ 20ರಂದು ಸೇವಾ ಸಮಿತಿಯು ಹಮ್ಮಿಕೊಳ್ಳುವ ಪಂ. ಪುಟ್ಟರಾಜ ಸಾಹಿತ್ಯೋತ್ಸವ-2024 ಸಮಾರಂಭದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಈ ಪ್ರಶಸ್ತಿಗಾಗಿ ಬಂದ 130ಕ್ಕೂ ಹೆಚ್ಚು ಸಾಹಿತ್ಯ ಕೃತಿಗಳಲ್ಲಿ ಪ್ರಥಮ ಸ್ಥಾನ ಪಡೆದ ಕೃತಿಗಳಾದ ಹುಬ್ಬಳ್ಳಿಯ ಪದ್ಮಜಾ ಜಯತೀರ್ಥ ಉಮರ್ಜಿ ಇವರ-ಬೃಂಗದ ಬೆನ್ನೇರಿ (ಕಥಾ ಸಂಕಲನ), ಬಾದಾಮಿಯ ಸುರೇಶ್ ಅರಳಿಮರದರವರ-ಹೀಗೇ ಒಂದಿಷ್ಟು (ಕವನ ಸಂಕಲನ) ಧಾರವಾಡದ ಡಾ. ಈರಣ್ಣ ಇಂಜಗನೇರಿ ಇವರ-ಫ್ರೀಡಮ್ (ಕಾದಂಬರಿ) ಕೊಪ್ಪಳ ಜಿಲ್ಲೆಯ ಬೈರಾಪುರದ ಎಲ್ಲಪ್ಪ ಮ. ಹರ್ನಾಳಗಿ ಇವರ-ತಿರುವು (ಲೇಖನಗಳ ಸಂಗ್ರಹ), ಧಾರವಾಡದ ಸರಸ್ವತಿ ರಾ ಭೋಸಲೆ ಇವರ-ಮೂರನೇ ಕಾಲು (ಮಕ್ಕಳ ಕಥೆಗಳು), ಧಾರವಾಡದ ಡಾ. ವೀಣಾ ಸಂಕನ ಗೌಡರ್ ಅವರ-ಮೂರು ಮತ್ತೊಂದು ನಾಟಕಗಳು, ಬೆಳಗಾವಿಯ ಡಾ. ಪಿ. ನಾಗರಾಜ್ ಅವರ ವಚನ ನಿರ್ವಚನ, ಶಿವಪುತ್ರ ಕಂಠಿ ಚಿಂಚನಸೂರ ಇವರ-ಸಾಧನೆಯ ಶಿಖರವನ್ನು ಏರಿದ ಶಿವಶರಣರು, ಬೀದರಿನ ಪೂಜ್ಯಶ್ರೀ ಜಗದ್ಗುರು ಶಿವಯೋಗೀಶ್ವರ ಸ್ವಾಮಿಗಳ-ಆತ್ಮಾನುಭವದ ಬುತ್ತಿ, ಡಾ. ಅಂಬುಜ ಎನ್ ಮಳಖೇಡಕರ್-ಮನ ಹರಿ ಧ್ಯಾನ ಮಂದಿರ ಭಕ್ತಿಗೀತೆಗಳು ಕೃತಿಗಳಿಗೆ ಸೇವಾ ಸಮಿತಿಯ ವರ್ಷದ ಶ್ರೇಷ್ಠ ಕೃತಿ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ವಿನುತ ಹಂಚಿನಮನಿ ಇವರ ನಾತಿಚರಾಮಿ, ರೂಪಾ ದೇವಿ ಬಂಗಾರ ಮುಡಿಪು, ಮಹಾಂತೇಶ್ ಕುಂಬಾರ ಇವರ ಕುಲುಮಿಯೊಳಗಿನ ಕವಿತೆಗಳು, ಎ.ಆರ್. ಪಂಪಣ್ಣ ಶೂನ್ಯದಿಂದತ್ತತ್ತ, ಮಾಲತೇಶ ಅಂಗೂರು ಕಾಡು ಮೇಡು, ಮತ್ತು ಪುಟ್ಟೇ ಸೋನುವಿನ ತರಲೆ ಕಥೆಗಳು ಕೃತಿಗಳು ತೀರ್ಪುಗಾರರ ಮೆಚ್ಚಿನ ಕೃತಿ ಅಭಿನಂದನಾ ಪ್ರಶಸ್ತಿಗೆ ಆಯ್ಕೆ ಆಗಿವೆ.

# ಉದ್ದ ಜಿಗಿತದಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ನರಗುಂದ ಕ್ರೀಡಾಂಗಣದಲ್ಲಿ ನಡೆದ ನರಗುಂದ ತಾಲೂಕು ಮಟ್ಟದ ಕ್ರೀಡಾಕೂಟದ ಉದ್ದ ಜಿಗಿತ ಸ್ಪರ್ಧೆಯಲ್ಲಿ ಕೊಣ್ಣೂರದ ಜನತಾ ಕಾಲೋನಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಪಡಿಯಪ್ಪ ಕಲಹಾಳ ದ್ವಿತೀಯ ಸ್ಥಾನ ಪಡೆದು ಜಿಲ್ಲಾ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾನೆ.

ಮುಖ್ಯೋಪಾಧ್ಯಾಯ ರಾಮಚಂದ್ರ ಪವಾರ, ಫಕೀರಪ್ಪ ಮನಿಕಟ್ಟಿ, ಬಸವರಾಜ ಬನಹಟ್ಟಿ, ದ್ಯಾಮಣ್ಣ ಮ್ಯಾಗಲಮನಿ, ಮಹಾದೇವಿ ರಾಮಣ್ಣವರ, ತೋಟಯ್ಯ ವಿರಕ್ತಮಠ, ಕಸ್ತೂರಿ ಬನ್ನಿಗಿಡದ, ಶ್ಯಾಮಲಾ ಶಿಂಫಿ, ರೂಪಾ ವಾಲ್ಗದ, ಜಯಶ್ರೀ ಪಾಟೀಲ ಹಾಗೂ ಎಸ್‌ಡಿಎಂಸಿ ಅಧ್ಯಕ್ಷ ಈರಣ್ಣ ಬಾಳಣ್ಣವರ ವಿದ್ಯಾರ್ಥಿಯ ಸಾಧನೆಗೆ ಹರ್ಷ ವ್ಯಕ್ತಪಡಿಸಿದ್ದಾರೆ.

# ಎಸ್‌ಎಸ್‌ಕೆ ದಸರಾ ಉತ್ಸವದ ಇಂದಿನ ಕಾರ್ಯಕ್ರಮ

■ **ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಇಲ್ಲಿನ ಎಸ್‌ಎಸ್‌ಕೆ ದಸರಾ ಉತ್ಸವ ಸಮಿತಿಯ ಮಹಿಳಾ ಮಂಡಳದ ವತಿಯಿಂದ ದೇವಸ್ಥಾನದಲ್ಲಿ ಅ.4ರಸಾಯಂಕಾಲ 7 ಗಂಟೆಗೆ ಲೀಲಾ ಅಬ್ಯಾಕಸ್ ಅಕ್ಯಾಡೆಮಿ ವತಿಯಿಂದ ಮಾನಸಿಕ ಅಂಕ ಗಣಿತ ಪ್ರದರ್ಶನ ಜರುಗುವುದು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ಮಂಡಳದ ಅಧ್ಯಕ್ಷರಾದ ಸರೋಜಾ ಎಚ್.ಕಬಾಡಿ ವಹಿಸುವರು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮನಿಷಾ ಬಿ.ಕಬಾಡಿ, ರೇಣುಕಾ ಜೆ.ಖೋಡೆ ಆಗಮಿಸುವರು.

ಈ ಸಂದರ್ಭದಲ್ಲಿ ಮಂಗಳಾಬಾಯಿ ಜಿ.ರಾಯಬಾಗಿ ಹಾಗೂ ರತ್ನಾಬಾಯಿ ಗಿರುಸಾ ಬದಿ ಇವರನ್ನು ಸನ್ಮಾನಿಸಲಾಗುವುದು. ನಂತರ 7-30 ಗಂಟೆಗೆ ಎಸ್‌ಎಸ್‌ಕೆ ಮಹಿಳಾ ಮಂಡಳದವರಿಗಾಗಿ ರೂಲಿಂಣ್ ದ ಡೈಸ್ ಸ್ಪರ್ಧೆ ಜರುಗಲಿದೆ ಎಂದು ಪ್ರಕಟಣೆ ತಿಳಿಸಿದೆ.

**ಶ್ರೀ ದತ್ತಾತ್ರೇಯ ದೇವಸ್ಥಾನದ ಕಾರ್ಯಕ್ರಮದಲ್ಲಿ ಅರುಣ ಕುಲಕರ್ಣಿ ಅಭಿಮತ**

# ಗುರುಸೇವೆಯನ್ನು ಬ್ರಹ್ಮಾನಂದರಿಂದ ಕಲಿಯಿರಿ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಾರತದಲ್ಲಿ ಗುರು-ಶಿಷ್ಯ ಸಂಭಂಧಕ್ಕೆ ವಿಶಿಷ್ಟವಾದ ಮಹತ್ವವಿದೆ. ಈ ಸಂಬಂಧದ ಅನೇಕ ಉದಾಹರಣೆಗಳು ನಮ್ಮ ಕಣ್ಣ ಮುಂದಿವೆ. ಅವುಗಳಲ್ಲಿ ಸದ್ಗುರು ಶ್ರೀ ಬ್ರಹ್ಮ ಚೈತನ್ಯರು ಮತ್ತು ಸದ್ಗುರು ಶ್ರೀ ಬ್ರಹ್ಮಾನಂದರ ಅವಿನಾಭಾವ ಸಂಬಂಧವನ್ನು ವರ್ಣಿಸಲು ಪದಗಳು ಸಿಗುವುದಿಲ್ಲ. ಬ್ರಹ್ಮಾನಂದ ಗುರುಗಳನ್ನು ನೋಡಿಯೇ ಗುರುಗಳ ಸೇವೆ ಹೇಗೆ ಮಾಡಬೇಕೆಂಬುದನ್ನು ಕಲಿಯಬೇಕೆಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.



ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ಅನಸೂಯಾ ಮಹಿಳಾ ಮಂಡಳದ ವತಿಯಿಂದ ಆಚರಿಸಲಾದ ಬ್ರಹ್ಮಾನಂದ ಗುರುಗಳ ನಿರ್ಯಾಣದ ಬುಕೀಟು ಅರ್ಪಿಸುವ ಸಮಾರಂಭದಲ್ಲಿ ಅವರು ಮಾತನಾಡಿದರು.

ತಮ್ಮ ಶಿಷ್ಯ ಬ್ರಹ್ಮಾನಂದರ ಮೂಲಕ ಬ್ರಹ್ಮ ಚೈತನ್ಯರು ಅದ್ದೇಗೆ ಕರ್ನಾಟಕದಲ್ಲಿ ರಾಮನಾಮ ಜಪದ ಸವಿಯನ್ನು ಹಚ್ಚಿಸಿದರು ಎಂಬುದನ್ನು ತಿಳಿಯಲು ಸದ್ಗುರು ಶ್ರೀ ಬ್ರಹ್ಮಾನಂದರ ಚರಿತ್ರೆ ಗ್ರಂಥವನ್ನು ಓದಬೇಕು. ಅದರಲ್ಲಿನ ಸಂಗತಿಗಳು ನಮ್ಮನ್ನು ಭಾವನಾ ಲೋಕಕ್ಕೆ ಕರೆದೊಯ್ಯುತ್ತವೆ. ಅವರ ಪ್ರಾರಂಭಿಕ ಜೀವನವನ್ನು ಕಂಡಾಗ ಇಂತಹ ವ್ಯಕ್ತಿ ಮುಂದೆ ಹೇಗೆ ಈ ನಾಡನ್ನೇ ಆಳಿದ ಆಧ್ಯಾತ್ಮಿಕ ದೊರೆಯಾದರು ಎಂಬುದು ಅಗಾಧವೆನ್ನಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಶೇಷಗಿರಿ ಕುಲಕರ್ಣಿ, ಎ.ಜಿ. ಕುಲಕರ್ಣಿ, ವಿನಾಯಕ ಗ್ರಾಮಪುರೋಹಿತ, ಆನಂದ ಕುಲಕರ್ಣಿ, ಬಾಬು ಕಾಳೆ, ಮಂಜುನಾಥ ಗ್ರಾಮಪುರೋಹಿತ, ಆನಂದ ಕಾಳೆ, ಸನ್ಮತಿ ಸದರಜೋಷಿ, ವಿಮಲಾಬಾಯಿ ಗ್ರಾಮಪುರೋಹಿತ, ರಾಜಶ್ರೀ ಕುಲಕರ್ಣಿ, ಶೋಭಾ ಕುಲಕರ್ಣಿ, ಪ್ರತೀಕ್ಷಾ ಕುಲಕರ್ಣಿ, ಸೀಮಾ ಕೊಂಡಿ, ಪಲ್ಲವಿ ಗ್ರಾಮಪುರೋಹಿತ, ಶ್ರೇಯಾ ನಾಡಿಗೇರ, ಜ್ಯೋತಿ ನಾಡಿಗೇರ, ಲಕ್ಷ್ಮಿ ಗ್ರಾಮಪುರೋಹಿತ, ನಿಖಿತಾ ಗ್ರಾಮಪುರೋಹಿತ, ಪರಿಮಳಾ ಗ್ರಾಮಪುರೋಹಿತ, ಅಪೇಕ್ಷಾ ಕುರಂದವಾಡ, ವಿದ್ಯಾ ಗ್ರಾಮಪುರೋಹಿತ, ಸುಶೀಲಾ ಪುರಾಣಿಕ, ಅನಿತಾ ಗ್ರಾಮಪುರೋಹಿತ, ಅರ್ಚನಾ ಕುಲಕರ್ಣಿ, ಪ್ರಭಾ ರಾಯಭಟ್ಟನವರ, ಜಯಶ್ರೀ ಗ್ರಾಮಪುರೋಹಿತ, ಪ್ರಿಯಾ ಕುಲಕರ್ಣಿ, ದೀಪಾ ಕುಲಕರ್ಣಿ, ಸ್ಫೂರ್ತಿರಾಣಿ ಕುಲಕರ್ಣಿ, ಪೂಜಾ ಗ್ರಾಮಪುರೋಹಿತ, ಅನಘಾ ಗ್ರಾಮಪುರೋಹಿತ, ಅನುಪಮಾ ಗ್ರಾಮಪುರೋಹಿತ ಮುಂತಾದವರಿದ್ದರು.

# ವಿದ್ಯುತ್ ಸ್ಪರ್ಶದಿಂದ 11 ಕುರಿ, 1 ನಾಯಿ ಸಾವು



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವಿದ್ಯುತ್ ಸ್ಪರ್ಶದಿಂದ 11 ಕುರಿಗಳು, 1 ನಾಯಿ ಸಾವನ್ನಪ್ಪಿದ್ದು, ಕುರಿಗಾಹಿ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾದ ಘಟನೆ ಗದಗ ಜಿಲ್ಲೆ ಗಜೇಂದ್ರಗಡ ತಾಲೂಕಿನ ಮಾರನಬಸರಿ ಹೊರವಲಯದ ಜಮೀನಿನಲ್ಲಿ ನಡೆದಿದೆ.

ಬೆಳಗಾವಿ ಜಿಲ್ಲೆ ಚಿಂಚಣಿ ಗ್ರಾಮದ ನವಲಪ್ಪ ಹೆಗಡೆ ಎಂಬ ಸಂಚಾರಿ ಕುರಿಗಾಹಿಗೆ ಸಂಬಂಧಿಸಿದ ಕುರಿಗಳು ಸಾವನ್ನಪ್ಪಿವೆ. ಮಾರನಸರಿ, ಜಕ್ಕಲಿ ಮಧ್ಯದ ಮಡ್ಡಿಯ ಜಮೀನಿನೊಂದರಲ್ಲಿ ವಿದ್ಯುತ್ ಕಂಬ ನೆಲಕ್ಕೆ ಬಿದ್ದಿತ್ತು. ಕಂಬ ಬಿದ್ದು ಎರಡು ದಿನವಾದರೂ ಆ ಕಂಬದಲ್ಲಿನ ವಿದ್ಯುತ್ ಸಂಚಾರವನ್ನು ನಿಷ್ಕ್ರಿಯಗೊಳಿಸಿರಲಿಲ್ಲ. ಸಂಚಾರಿ ಕುರಿಗಾಹಿಗೆ ಇದು ಗೊತ್ತಾಗದೆ ಅವರು ತಮ್ಮ ಕುರಿ ಹಾಗೂ ತಮ್ಮ ಸಂಗಡಿಗರೊಂದಿಗೆ ಹೋಗಿದ್ದಾರೆ. ನೆಲಕ್ಕೆ ಬಿದ್ದ ವಿದ್ಯುತ್ ತಂತಿ ಮೇಲೆ ಕಾಲಿಟ್ಟ ಕುರಿಗಳು ಹಾಗೂ ನಾಯಿಗೆ ವಿದ್ಯುತ್ ಪ್ರವಹಿಸಿ ಸ್ಥಳದಲ್ಲೇ ಸಾವನ್ನಪ್ಪಿವೆ.

ಐದು ಜನ ಕುರಿಗಾಹಿಗಳ ಪೈಕಿ ಭೀಮಣ್ಣ ಎಂಬ ಕುರಿಗಾಹಿಗೆ ವಿದ್ಯುತ್ ಪ್ರವಹಿಸಿ, ಸ್ವಲ್ಪದರಲ್ಲಿ ಸಾವಿನಿಂದ ಬಚಾವ್ ಆಗಿದ್ದಾನೆ. ಇದರಿಂದ ಇನ್ನುಳಿದ ನವಲಪ್ಪ, ರಾಯಣ್ಣ, ಮಂಜುನಾಥ, ಶ್ರೀಕಾಂತ ಎಂಬ ನಾಲ್ವರು ಎಚ್ಚೆತ್ತುಕೊಂಡು ಉಳಿದ 300 ಕುರಿಗಳ ಹಿಂಡನ್ನು ಬೇರೆ ಕಡೆಗೆ ಸಾಗಿಸಿದ್ದಾರೆ. ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಮೃತ ಕುರಿಗಳನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಲಾಗಿದೆ. ಈ ಕುರಿತು ಗದಗ ಜಿಲ್ಲೆಯ ನರೇಗಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಶುಭಾಗಮನ ಸ್ವಾಗತ ಸಮಾರಂಭದದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಸಂಸ್ಕೃತಿ ಬೆಳೆಸುವುದು ದಸರಾ ಸಮಾರಂಭದ ಗುರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜನ ಸಮುದಾಯದಲ್ಲಿ ಸಂಸ್ಕೃತಿ, ಸೌಹಾರ್ದತೆ ಬೆಳೆಸುವುದೇ ದಸರಾ ಧರ್ಮ ಸಮ್ಮೇಳನದ ಮೂಲ ಗುರಿ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ರೋಣ ತಾಲೂಕಿನ ಅಬ್ಬಿಗೇರಿ ದಸರಾ ಮಹೋತ್ಸವದ ನಿಮಿತ್ತ ಆಗಮಿಸಿದ ಸಂದರ್ಭದಲ್ಲಿ ಶುಭಾಗಮನ ಸ್ವಾಗತ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಶ್ರೇಷ್ಠ ವ್ಯಕ್ತಿಗಳ ಜೊತೆಗೆ ಸಂಪರ್ಕ ಇದ್ದರೆ ಸಾಲದು. ಅವರ ಆದರ್ಶ ಗುಣಗಳನ್ನು ಅಳವಡಿಸಿಕೊಳ್ಳಬೇಕು. ಶ್ರೇಷ್ಠ ಗ್ರಂಥಗಳನ್ನು ಖರೀದಿಸಿ ಇಟ್ಟರೆ ಸಾಲದು. ಅವುಗಳಲ್ಲಿರುವ ತತ್ವಗಳನ್ನು ಅನುಷ್ಠಾನಕ್ಕೆ ತರಬೇಕು. ವಿಶ್ವ ವಿದ್ಯಾಲಯಗಳಲ್ಲಿ ಸಿಗುವ ಪದವಿ ಮುಖ್ಯವಲ್ಲ. ಮನೆ-ಮನೆತನಗಳಲ್ಲಿ ಸಿಗುವ ಸಂಸ್ಕಾರವೂ ಮುಖ್ಯ. ಪದವಿ ಹೊಟ್ಟೆ ಪಾಡಿನ ದಾರಿ ತೆ-ೂರಿದರೆ ಸಂಸ್ಕಾರ ಇಡೀ ಜೀವನದ ದಾರಿ ತೋರಿಸುತ್ತದೆ. ಉಸಿರು ನಿಂತರೆ ಮಾತ್ರ ಸಾವಲ್ಲ. ನಮ್ಮ ಧರ್ಮ ಸಂಸ್ಕೃತಿಗಳ ಮೇಲಾಗುತ್ತಿರುವ ನಿರಂತರ ದಬ್ಬಾಳಿಕೆಯನ್ನು ನೋಡಿಯೂ ಮೌನದಿಂದಿರುವುದು ಕೂಡಾ ಸಾವೇ ಎಂಬುದನ್ನು ಮರೆಯಬಾರದು ಎಂದರು.

ಸ್ವಾತಂತ್ರ್ಯ ಸಂಗ್ರಾಮದಲ್ಲಿ ಮುಂಚೂಣಿಯಲ್ಲಿ ನಿಂತು ಶ್ರಮಿಸಿದ ಮಹಾತ್ಮ ಗಾಂಧೀಜಿ ಹಾಗೂ ದಕ್ಷ, ಪ್ರಾಮಾಣಿಕ, ಜನಪರ ಕಾಳಜಿ ಉಳ್ಳ



ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜಯಂತಿ ಮಹೋತ್ಸವ ಒಂದೇ ದಿನ ಬಂದಿರುವುದು ಸಂತೋಷದ ಸಂಗತಿ. ಅವರ ಸರಳತೆ, ಸಾತ್ವಿಕ ಮನೋಭಾವವನ್ನು ಎಷ್ಟು ವರ್ಣಿಸಿದರೂ ಕಡಿಮೆ. ಬೆಳೆಯುವ ಯುವ ಜನಾಂಗದಲ್ಲಿ ಮತ್ತು ರಾಜಕೀಯ ಧುರೀಣರಲ್ಲಿ ಅವರ ಆದರ್ಶ ಗುಣಗಳು ಬೆಳೆದು ಬಂದರೆ ನಾಡು-ನುಡಿ ಶ್ರೀಮಂತಗೊಳ್ಳುವುದರಲ್ಲಿ ಸಂದೇಹ ಇಲ್ಲ. ಅಬ್ಬಿಗೇರಿ ಗ್ರಾಮಕ್ಕೆ ದಯಮಾಡಿಸಿದ ಸಂದರ್ಭದಲ್ಲಿ ಜಯಂತ್ಯುತ್ಸವದ ಈ ಮಂಗಳಮಯ ವೇದಿಕೆಯಲ್ಲಿ ಜರುಗುತ್ತಿರುವುದು ರಾಷ್ಟ್ರಾಭಿಮಾನಿಗಳಿಗೆ ಸಂತೋಷವನ್ನು ಉಂಟು ಮಾಡಿದೆ. ಹತ್ತು ದಿನಗಳ ಕಾಲ ಜರುಗುವ ದಸರಾ ಧರ್ಮ ಸಮ್ಮೇಳನ ಈ ಹಿಂದಿನ ದಾಖಲೆಗಳನ್ನು ಮೀರಿ ಯಶಸ್ವಿಯಾಗಿ ಜರುಗುತ್ತದೆ ಎಂಬ ಆತ್ಮ ವಿಶ್ವಾಸವಿದೆ. ಲಿಂ. ಸೋಮಶೇಖರ ಶ್ರೀಗಳ ಸಂಕಲ್ಪವನ್ನು ಅಬ್ಬಿಗೇರಿ ಹಿರೇಮಠದ ವೀರಭದ್ರ ಶಿವಾಚಾರ್ಯರು, ಸಕಲ ಸದ್ಭಕ್ತರು ಸಾಕಾರಗೊಳಿಸುತ್ತಿರುವುದನ್ನು ಕಂಡು ಸಂತೋಷವಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.

> ಚಿನ್ನಕ್ಕಿಂತ ಅನ್ನಕ್ಕಿರುವ ಬೆಲೆ ಜಾಸ್ತಿ. ಏಕೆಂದರೆ ಚಿನ್ನವಿಲ್ಲದೇ ಬದುಕಬಹುದು. ಆದರೆ ಅನ್ನವಿಲ್ಲದೇ ಬದುಕಿ ಬಾಳಲಾಗದು. ಶ್ರೀ ಜಗದ್ಗುರು ರೇಣುಕಾಚಾರ್ಯರು ವೀರಶೈವ ಸಂಸ್ಕೃತಿಯಲ್ಲಿ ಉತ್ಕೃಷ್ಟ ಮಾನವೀಯ ಮೌಲ್ಯಗಳನ್ನು ಬೋಧಿಸಿದ್ದಾರೆ. ಅವರು ತೆ-ೂರಿದ ಧರ್ಮದ ಹೆದ್ದಾರಿಯಲ್ಲಿ ನಡೆದರೆ ಬದುಕು ಸಾರ್ಥಕಗೊಳ್ಳುವುದು.
>
> -ಡಾ. ವೀರಸೋಮೇಶ್ವರ ಜಗದ್ಗುರುಗಳು.
> ಶ್ರೀ ರಂಭಾಪುರಿ ಪೀಠ, ಬಾಳೆಹೊನ್ನೂರು.

**ಭವ್ಯ ಸ್ವಾಗತ**

ಸಮಾರಂಭಕ್ಕೂ ಮುನ್ನ ಅಬ್ಬಿಗೇರಿ ಗ್ರಾಮಕ್ಕೆ ಆಗಮಿಸಿದ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಪೂರ್ಣ ಕುಂಭ, ಕಲಶ ವಾದ್ಯ ವೈಭವದೊಂದಿಗೆ ಭವ್ಯವಾಗಿ ಸ್ವಾಗತಿಸಲಾಯಿತು. ಕೋಟುಮಚಗಿ ಕ್ರಾಸಿನಿಂದ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಎತ್ತುಗಳ ಜೊತೆಗೆ 108 ಟ್ರಾಕ್ಟರ್‌ಗಳೊಂದಿಗೆ ಸ್ವಾಗತಿಸಿದ ದೃಶ್ಯ ಅಪೂರ್ವವಾಗಿತ್ತು.

ಸೂಡಿ ಡಾ.ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು ಪ್ರಾಸ್ತಾವಿಕ ಮಾತನಾಡಿದರು. ಎಡೆಯೂರು ರೇಣುಕ ಶಿವಾಚಾರ್ಯರು ಉಪದೇಶಾಮೃತ ನೀಡಿದರು. ಸುಳ್ಳ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ನರೇಗಲ್ ಮಲ್ಲಿಕಾರ್ಜುನ ಶಿವಾಚಾರ್ಯರು, ಮಳಲಿ ಡಾ.ನಾಗಭೂಷಣ ಶಿವಾಚಾರ್ಯರು, ಸಂಗೊಳ್ಳಿ ಗುರುಲಿಂಗ ಶಿವಾಚಾರ್ಯರು, ಚಳಗೇರಿ ವೀರಸಂಗಮೇಶ್ವರ ಶಿವಾಚಾರ್ಯರು, ನಾಗವಂದ ಶಿವಯೋಗಿ ಶಿವಾಚಾರ್ಯರು, ದೋಟಿಹಾಳ ದೇವರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಸಿದ್ಧರಬೆಟ್ಟ ವೀರಭದ್ರ ಶಿವಾಚಾರ್ಯರು ಸ್ವಾಗತಿಸಿದರು. ಶಿವಮೊಗ್ಗದ ಶಾಂತಾ ಆನಂದ ಪ್ರಾರ್ಥನೆ ಹಾಡಿದರು. ವೀರೇಶ ಕೂಗು ನಿರೂಪಿಸಿದರು.

### ಕೊಳಗೇರಿ ನಿವಾಸಿಗಳ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಸ್ಲಂ ಬೋರ್ಡ್ ಅಧಿಕಾರಿಗಳಿಗೆ ಮನವಿ

# ಅ.7ರಂದು ಸ್ಲಂ ಬೋರ್ಡ್ ಕಚೇರಿಗೆ ಮುತ್ತಿಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದಲ್ಲಿ ಅನೇಕ ಸ್ಲಂ ಪ್ರದೇಶಗಳನ್ನು ಸ್ಲಂ ಕಾಯ್ದೆ 197 ರ ಪ್ರಕಾರ ಘೋಷಣೆ ಮಾಡಿ ಸುಮಾರು ದಶಕಗಳು ಕಳೆದರೂ ಸಹ ಈ ವರೆಗೂ ಸ್ಥಳೀಯ ನಾಗರಿಕರಿಗೆ ಕನಿಷ್ಠ ಮಟ್ಟದ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸ್ಲಂ ಬೋರ್ಡ್ ಅಧಿಕಾರಿಗಳು ಸಂಪೂರ್ಣ ವಿಫಲರಾಗಿದ್ದಾರೆ. ಸ್ಲಂ ಪ್ರದೇಶದ ವಸತಿ, ಶೌಚಾಲಯ, ಚರಂಡಿ, ರಸ್ತೆ ಹಾಗೂ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿ ಪದಾಧಿಕಾರಿಗಳು ಸ್ಲಂ ಬೋರ್ಡ್ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ಕಳೆದ ಹಲವು ವರ್ಷಗಳಿಂದ ನಗರದ ಕೊಳಗೇರಿ ಪ್ರದೇಶಗಳ ಅಭಿವೃದ್ಧಿಗಾಗಿ ನಿರಂತರ ಹೋರಾಟಗಳನ್ನು ನಡೆಸಿದರೂ ಅಧಿಕಾರಿಗಳು ಮಾತ್ರ ಕಾಣದವರಂತೆ ವರ್ತಿಸುತ್ತಿದ್ದಾರೆ. ಇದರ ಬಗ್ಗೆ ಅನೇಕ ಬಾರಿ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರೂ ಸ್ಲಂ ಬೋರ್ಡ್ ಅಧಿಕಾರಿಗಳ ಮೇಲೆ ಕ್ರಮ ಜರುಗಿಸದೇ ಮೌನವಾಗಿರುವುದನ್ನು ನಾವು ಖಂಡಿಸುತ್ತೇವೆ.

ಸ್ಲಂ ಬೋರ್ಡ್ ಅಧಿಕಾರಿಗಳ ದುರಾಡಳಿತವನ್ನು ಖಂಡಿಸಿ ಅ.7ರಂದು ಸ್ಲಂ ಸಮಿತಿಯ ನೇತೃತ್ವದಲ್ಲಿ ನಗರದ ನೂರಾರು ಸ್ಲಂ ನಿವಾಸಿಗಳಿಂದ ಸ್ಲಂ ಬೋರ್ಡ್ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಗುತ್ತಿದ್ದು, ಗದಗ-ಬೆಟಗೇರಿ ನಗರದ ಎಲ್ಲಾ ಸ್ಲಂ ಪ್ರದೇಶದ ಜನರು ಹೋರಾಟದಲ್ಲಿ ಭಾಗವಹಿಸಬೇಕೆಂದು ಹೇಳಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಮೆಹರುನಿಸಾ ಢಾಲಾಯತ, ಸಾಕ್ರುಬಾಯಿ ಗೋಸಾವಿ, ಮೈಮುನಿಸಾ ಬೈರಕದಾರ, ಮಲೇಶಪ್ಪ ಕಲಾಲ, ದಾದು ಗೋಸಾವಿ, ಮಕ್ತುಮಸಾಬ ಮುಲ್ಲಾನವರ, ನಜೀರಅಹ್ಮದ ಹಾವಗಾರ, ಶಂಕ್ರಪ್ಪ ರೋಣ, ಜಾಫರ ಮಲಬಾರ, ಮೀನಾಕ್ಷಿ ಅಣ್ಣಿಗೇರಿ, ಹಾಗೂ ವಿವಿಧ ಸ್ಲಂ ಪ್ರದೇಶದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



> ಗದಗ ಜಿಲ್ಲೆಯ ಸ್ಲಂ ಜನರು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಹಾಗೂ ಮನವಿಗಳನ್ನು ನೀಡಲು ಸ್ಲಂ ಬೋರ್ಡ್ ಕಚೇರಿಗೆ ಹೋದರೆ ಅಧಿಕಾರಿಗಳು ಸ್ಥಳದಲ್ಲಿ ಸಿಗದೇ ಸುಳ್ಳು ಹೇಳುತ್ತ ಕಾಲ ಕಳೆಯುತ್ತಿದ್ದಾರೆ ಎಂದು ಇಮ್ತಿಯಾಜ ಆರ್. ಮಾನ್ವಿ ಆರೋಪಿಸಿದರು.

### ವಿವಿಧ ಒಕ್ಕೂಟಗಳಿಂದ ಅ.4ರಿಂದ ಫ್ರೀಡಂ ಪಾರ್ಕ್‌ನಲ್ಲಿ ಹೋರಾಟ

# ರಜೆ ಮಂಜೂರು ಮಾಡಲು ಮನವಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ವಿವಿಧ ಕಾನೂನುಬದ್ಧ ಬೇಡಿಕೆಗಳ ಈಡೇರಿಕೆಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯ ಅಧಿಕಾರಿಗಳು, ನೌಕರರ ಎಲ್ಲಾ ವೃಂದ ಸಂಘಗಳು, ನರೇಗಾ ನೌಕರರು, ಗ್ರಾ.ಪಂ ಹೊರಗುತ್ತಿಗೆ ನೌಕರರ ಸಂಘಗಳು ಹಾಗೂ ಗ್ರಾಮ ಪಂಚಾಯಿತಿ ಸದಸ್ಯರ ಒಕ್ಕೂಟದ ಸಹಯೋಗದಲ್ಲಿ ಅ.4ರಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಹೋರಾಟಕ್ಕೆ ರಜೆ ಮಂಜೂರು ಮಾಡುವಂತೆ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಬಡಿಗೇರ ಅವರಿಗೆ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯ ನೌಕರರ ಸಂಘದ ಮುಖಂಡರು ಮನವಿ ಸಲ್ಲಿಸಿದರು.

ನೌಕರರ ಸಂಘದ ಮುಖಂಡರು ಮಾತನಾಡಿ, ಗಜೇಂದ್ರಗಡ ತಾಲೂಕಿನ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಗ್ರಾಮ ಪಂಚಾಯಿತಿಯ ಎಲ್ಲ ಪಂಚ ನೌಕರರಾದ ಪಿ.ಡಿ.ಓ, ಕರ ವಸೂಲಿಗಾರರು, ಜಲಗಾರರು, ಕಛೇರಿ ಸಹಾಯಕರು, ಸ್ವಚ್ಛತಾಗಾರರು ಕಾರ್ಯನಿರ್ವಹಣೆಯಲ್ಲಿ ಎದುರಿಸುತ್ತಿರುವ ಹಲವು ಸಮಸ್ಯೆಗಳನ್ನು ಪರಿಹರಿಸುವಂತೆ ಹಾಗೂ ಸೂಕ್ತ ವ್ಯವಸ್ಥೆ ಕಲ್ಪಿಸುವಂತೆ ಸರ್ಕಾರ ಮತ್ತು ಇಲಾಖೆಗೆ ಹಲವಾರು ವರ್ಷಗಳಿಂದ ಮನವಿ ಸಲ್ಲಿಸುತ್ತಾ ಬಂದರೂ ಯಾವುದೇ ಮನವಿಗಳಿಗೂ ಸ್ಪಂದಿಸದೇ ಕೇವಲ ಪಂಚಾಯತ ಅಭಿವೃದ್ಧಿ ಅಧಿಕಾರಿಗಳನ್ನು, ನೌಕರರನ್ನು ಹಾಗೂ ಸಿಬ್ಬಂದಿಗಳನ್ನು ನೇರ ಹೊಣೆಗಾರರನ್ನಾಗಿಸಲಾಗುತ್ತಿದೆ ಎಂದರು.

ಈ ವೇಳೆ ಪಿಡಿಓ ಮಹಾಂತೇಶ ತಳವಾರ, ಹುಲ್ಲಪ್ಪ ಹಳಳ್ಳಿಕೇರಿ, ಬಿ.ಎನ್. ಇಟಗಿಮಠ, ತನವೀರ್ ದೊಡ್ಡಮನಿ, ಪ್ರಕಾಶ ನರೇಗಲ್, ಮರಿಲಿಂಗಪ್ಪ ಮುತಾರಿ, ಎಸ್.ಆರ್. ಸಂಕನೂರು, ಮುದಕಪ್ಪ ದೊಣ್ಣೆಗುಡ್ಡ, ಮಲ್ಲಪ್ಪ ಉಪ್ಪಾರ, ಮಹೇಶ ಭಗವತಿ, ಪರಶುರಾಮ್ ಮ್ಯಾಗಲಮನಿ, ಮಲ್ಲಪ್ಪ ಹೂಗಾರ, ಸಕ್ರಪ್ಪ ಬಿಳೇಕಲ್ ಸೇರಿದಂತೆ ಇತರರು ಹಾಜರಿದ್ದರು.



> ಸರ್ಕಾರ ಮತ್ತು ಇಲಾಖೆಯ ಇಂತಹ ಧೋರಣೆಯನ್ನು ಖಂಡಿಸಿ ಹಾಗೂ ವಿವಿಧ ಬೇಡಿಕೆಗಳನ್ನು ಇಡೇರಿಸುವಂತೆ ಒತ್ತಾಯಿಸಿ ಅಕ್ಟೋಬರ್ 4ರಿಂದ ರಾಜ್ಯಾದ್ಯಂತ ಗ್ರಾಮ ಪಂಚಾಯಿತಿಯ ಸೇವೆಗಳಾದ ಬಾಪೂಜಿ ಸೇವೆ ಹಾಗೂ ಕಛೇರಿಯ ಎಲ್ಲಾ ಕರ್ತವ್ಯ (ಕುಡಿಯುವ ನೀರು, ಬೀದಿ ದೀಪ ಹಾಗೂ ಸ್ವಚ್ಛತೆ ಹೊರತುಪಡಿಸಿ) ನಿರ್ವಹಿಸುವುದನ್ನು ನಿಲ್ಲಿಸಿ ಅನಿರ್ದಿಷ್ಟಾವಧಿ ಹೋರಾಟ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿದ್ದು, ಸದರಿ ಹೋರಾಟದಲ್ಲಿ ಪಾಲ್ಗೊಳ್ಳುವುದರಿಂದ ಅಕ್ಟೋಬರ್ 4ರಿಂದ ರಜೆ ಮಂಜೂರು ಮಾಡವಂತೆ ಮನವಿ ಸಲ್ಲಿಸಿದರು.

### ಗದಗ ತಾಲೂಕಿನಲ್ಲಿ 'ಉದ್ಯೋಗ ಖಾತರಿ ನಡೆ ಸಬಲತೆಯೆಡೆಗೆ' ಅಭಿಯಾನಕ್ಕೆ ಚಾಲನೆ

# ಲಕ್ಕುಂಡಿ ಗ್ರಾ.ಪಂನಲ್ಲಿ ಗ್ರಾಮ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕು ಪಂಚಾಯಿತಿ ವ್ಯಾಪ್ತಿಯ ಲಕ್ಕುಂಡಿ ಗ್ರಾಮದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹಾದ್ದೂರ್ ಶಾಸ್ತ್ರಿಯವರ ಜಯಂತಿಯನ್ನು ಆಚರಿಸಿ, 2025-26ನೇ ಸಾಲಿನ ಕಾರ್ಮಿಕ ಆಯವ್ಯಯ ಹಾಗೂ ಕ್ರಿಯಾಯೋಜನೆ ತಯಾರಿಸುವ ಕುರಿತು ಗ್ರಾಮ ಸಭೆ ಜರುಗಿತು.

ಇದೇ ಸಂದರ್ಭದಲ್ಲಿ 'ಉದ್ಯೋಗ ಖಾತರಿ ನಡಿಗೆ ಸಬಲತೆಯೆಡೆಗೆ' ಅಭಿಯಾನಕ್ಕೆ ನರೇಗಾ ವಯಕ್ತಿಕ ಕಾಮಗಾರಿ ಮಾಹಿತಿಯುಳ್ಳ ಕರಪತ್ರವನ್ನು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಬಿಡುಗಡೆಗೊಳಿಸಿ ಮಾತನಾಡಿ, ಗ್ರಾಮೀಣ ಪ್ರದೇಶದ ಕುಟುಂಬಕ್ಕೆ ವರ್ಷದಲ್ಲಿ 100 ದಿನಗಳ ಕೆಲಸ ಖಾತರಿ, ಗಂಡು-ಹೆಣ್ಣಿಗೆ ಸಮಾನ ಕೂಲಿ ಪ್ರತಿ ದಿನಕ್ಕೆ -349 ರೂ, ಸರಕಾರ ನಿಗದಿಪಡಿಸಿದ ಕೆಲಸದ ಅಳತೆ ನಿಗದಿ, ಒಂದು ದಿನದ ಕೂಲಿ ಪಡೆಯಲು ಮಾಡಬೇಕಾದ ಕೆಲಸದ ಪ್ರಮಾಣ ಮತ್ತು ಕೆಲಸದ ಅವಧಿ, ಯೋಜನೆಯಡಿಯಲ್ಲಿ ದೊರೆಯುವ ವಯಕ್ತಿಕ ಸೌಲಭ್ಯಗಳು ಮತ್ತು ಅರ್ಹತೆಗಳು, ಕಾಮಗಾರಿ ಪ್ರಮಾಣದಲ್ಲಿ ಹಿರಿಯ ನಾಗರಿಗರಿಗೆ ಮತ್ತು ವಿಶೇಷ ಚೇತನರಿಗೆ ಶೇ. 50ರಷ್ಟು ರಿಯಾಯಿತಿ, ಕಾಮಗಾರಿ ಸ್ಥಳದಲ್ಲಿ ಒದಗಿಸಬೇಕಾದ ಸೌಲಭ್ಯಗಳು ಹಾಗೂ ಇತರೆ ವಿಷಯಗಳ ಬಗ್ಗೆ ಮಾಹಿತಿ ನೀಡಿದರು.

ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ ಮಾತನಾಡಿ, ಗ್ರಾಮೀಣ ಪ್ರದೇಶದ ಜನರು ಪಟ್ಟಣಗಳಿಗೆ ಗುಳೆ ಹೋಗುವುದನ್ನು ತಪ್ಪಿಸಿ ನರೇಗಾದಡಿ ಕೆಲಸ ಪಡೆದು ತಮ್ಮೂರಲ್ಲೇ ನೆಲೆಸಬೇಕು. ಪ್ರತಿಯೊಬ್ಬರೂ 100 ಮಾನವ ದಿನಗಳ ಕೆಲಸ ಪಡೆಯಬೇಕು ಮತ್ತು ಪ್ರತಿ ವರ್ಷ ನರೇಗಾದಡಿ ಕೆಲಸ ಮಾಡುವವರ ಸಂಖ್ಯೆ ಹೆಚ್ಚಾಗಬೇಕು ಎಂದು ತಿಳಿಸಿದರು.



> ಸಹಾಯಕ ನಿರ್ದೇಶಕ ಕುಮಾರ ಪೂಜಾರ ಮಾತನಾಡಿ, ಪ್ರತಿಯೊಬ್ಬರೂ ನರೇಗಾ ಯೋಜನೆಯ ಸದುಪಯೋಗವನ್ನು ಪಡೆಯಬೇಕು. ನರೇಗಾ ಯೋಜನೆಯಲ್ಲಿ ಕೃಷಿ ಇಲಾಖೆ, ತೆ-ೂಟಗಾರಿಕೆ, ರೇಷ್ಮೆ ಮೀನುಗಾರಿಕೆ ಇಲಾಖೆಯಲ್ಲಿನ ಕಾಮಗಾರಿಗಳ ಸದುಪಯೋಗ ಪಡೆಯಬಹುದು. ಇನ್ನು ಮಹಿಳೆಯರು ನರೇಗಾ ಯೋಜನೆಯಲ್ಲಿ ಹೆಚ್ಚು ಭಾಗವಹಿಸಬೇಕು. ಅದರ ಜೊತೆಗೆ ವಯಕ್ತಿಕ ಕಾಮಗಾರಿಯನ್ನು ಪಡೆದುಕೊಂಡು ಆರ್ಥಿಕವಾಗಿ ಸದೃಢರಾಗಬೇಕು ಎಂದು ಹೇಳಿದರು.

# ಸ್ವಚ್ಛತೆಯಿಂದ ಆರೋಗ್ಯ ವೃದ್ಧಿ



■ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ಸೌಂದರ್ಯ ವರ್ಧನೆಗೆ ಸ್ವಚ್ಛತೆ ಅವಶ್ಯವಾಗಿದ್ದು, ನಾಗರಿಕ ಸಮುದಾಯ ಕಸವನ್ನು ರಸ್ತೆಗೆ ಚೆಲ್ಲದೆ ಪುರಸಭೆಯಿಂದ ಬರುವ ವಾಹನಗಳಲ್ಲಿ ಹಾಕಬೇಕು ಎಂದು ಪುರಸಭೆ ಸದಸ್ಯ ಸಂಗನಗೌಡ ಪಾಟೀಲ ಹೇಳಿದರು.

ಅವರು ಬುಧವಾರ ಸಂಜೆ ಪೋತರಾಜನ ಕಟ್ಟೆಯ ಬಳಿ ರಾಷ್ಟ್ರಪಿತ ಮಹಾತ್ಮ ಗಾಂಧಿಯವರ 155ನೇ ಜನ್ಮದಿನಾಚರಣೆ ನಿಮಿತ್ತ ಜರುಗಿದ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗಿಯಾಗಿ ಮಾತನಾಡಿದರು.

ಸ್ವಚ್ಛತೆಯಿಂದ ಇದ್ದಾಗ ಮಾತ್ರ ನಾಗರಿಕ ಸಮುದಾಯ ಆರೋಗ್ಯದಿಂದ ಇರಲು ಸಾಧ್ಯ ಎನ್ನುವುದನ್ನು ನಾವೆಲ್ಲರೂ ಅರಿತುಕೊಳ್ಳುವುದು ಅವಶ್ಯಕವಾಗಿದ್ದು, ಈ ದಿಶೆಯಲ್ಲಿ ಪಟ್ಟಣದ ಜನತೆ ತಮ್ಮ ವಾರ್ಡ್‌ಗಳ ಸ್ವಚ್ಛತೆಯ ಬಗ್ಗೆ ಮುತುವರ್ಜಿ ವಹಿಸಬೇಕು. ಮುಖ್ಯವಾಗಿ ಹಸಿ ಕಸ ಹಾಗೂ ಒಣ ಕಸಗಳನ್ನು ವಿಂಗಡಿಸಿ ಪುರಸಭೆಯ ವಾಹನದಲ್ಲಿ ಹಾಕಬೇಕೇ ಹೊರತು ರಸ್ತೆಗಳಲ್ಲಿ ಎಸೆಯಬೇಡಿ ಎಂದು ಮನವಿ ಮಾಡಿದರು.

ಪುರಸಭೆಯ ಉಪಾಧ್ಯಕ್ಷ ದುರ್ಗಪ್ಪ ಹಿರೇಮನಿ ಮಾತನಾಡಿ, ಸ್ವಚ್ಛತೆಯ ದೃಷ್ಟಿಯಿಂದ ನಾಗರಿಕ ಸಮುದಾಯ ಸೇರಿದಂತೆ ವ್ಯಾಪಾರಸ್ಥರು ಕೂಡ ಸಹಕರಿಸಬೇಕು. ವ್ಯಾಪರಸ್ಥರು ಅಂಗಡಿಗಳ ಮುಂದಿನ ಕಸವನ್ನು ಕಸ ವಿಲೇವಾರಿ ಮಾಡುವ ಪುರಸಭೆಯ ವಾಹನಗಳಿಗೆ ತಲುಪಿಸಿ. ಇದರಿಂದ ಪಟ್ಟಣದ ಅಂದ ಮತ್ತಷ್ಟು ವೃದ್ಧಿಸುತ್ತದೆ ಎಂದು ಮನವಿ ಮಾಡಿದರು.

ಅಧ್ಯಕ್ಷೆ ಗೀತಾ ಮಾಡಲಗೇರಿ ಸ್ವಚ್ಛತಾ ಅಭಿಯಾನಕ್ಕೆ ಚಾಲನೆಯನ್ನು ನೀಡಿದರು. ಸದಸ್ಯರಾದ ಗದಿಗೆಪ್ಪ ಕಿರೇಸೂರ, ದಾವಲಸಾಬ ಬಾಡಿನ, ಸಂಗಪ್ಪ ಜಿಡ್ಡಿಬಾಗಿಲ, ಮಾಜಿ ಸದಸ್ಯ ಖಾದಿರಸಾಬ ಸಂಕನೂರ, ಅಜೀಜ ಯಲಿಗಾರ, ನಾಮನಿರ್ದೇಶಿತ ಸದಸ್ಯ ಮಾಗಿ, ಮುಖ್ಯಾಧಿಕಾರಿ ರಮೇಶ ಹೊಸಮನಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka